ಶುಕ್ರವಾರ 23.01.2026
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 124
Digital Varthe Kannada Daily
Volume 01 - Issue 124
Friday, 23.01.2026
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ
ಕನ್ನಡ ದಿನಪತ್ರಿಕೆ
DIGITAL VARTHE
digitalvarthe@gmail.com
www.digitalvarthe.com

## ಜಗಳ ನಿಲ್ಲಿಸಲು ಯತ್ನಿಸಿದವನ ಕ್ರೂರ ಅಂತ್ಯ

**ಹುಬ್ಬಳ್ಳಿ:** ಆತ ಇಡೀ ಕುಟುಂಬಕ್ಕೆ ಆಧಾರವಾಗಿದ್ದ. ಹೋಟೆಲ್‌ವೊಂದರಲ್ಲಿ ಅಡುಗೆ ಕೆಲಸ ಮಾಡುತ್ತಾ ಸಂಸಾರ ನಡೆಸುತ್ತಿದ್ದ. ಬುದ್ಧ ಮಾತು ಹೇಳಿದ್ದಕ್ಕೆ ಇದೀಗ ಆತನೆ ಬಲಿ ಆಗಿದ್ದಾನೆ. ಮನೆ ಮುಂದೆ ನಿಂತು ಗಲಾಟೆ ಮಾಡುತ್ತಿದ್ದ ಸಂಬಂಧಿಗೆ ಜಗಳ ಮಾಡಬೇಡ, ಮಾತುಕತೆ ಮೂಲಕ ಸಮಸ್ಯೆ ಬಗೆಹರಿಕೊಳ್ಳೋಣ ಅಂತ ಹೇಳಿದ್ದಕ್ಕೆ ಸಂಬಂಧಿಯೇ ಕಲ್ಲಿನಿಂದ ಹೊಡೆದು ಕೊಲೆ ಮಾಡಿದ್ದಾನೆ. ಮನೆಗೆ ಆಧಾರವಾಗಿದ್ದ ವ್ಯಕ್ತಿ ಕಳೆದುಕೊಂಡ ಕುಟುಂಬ ಕಂಗಾಲಾಗಿದೆ.

**ನಡೆದದ್ದೇನು?:**ಹುಬ್ಬಳ್ಳಿ ನಗರದ ಗೌಶಿಯಾ ಟೌನ್‌ನಲ್ಲಿ ಕಳೆದ ರಾತ್ರಿ ಘಟನೆ ನಡೆದಿದೆ. ಅಹ್ಮದ್ ರಜಾಕ್ (48) ಕೊಲೆಯಾದ ವ್ಯಕ್ತಿ. ಹೋಟೆಲ್‌ನಲ್ಲಿ ಅಡುಗೆ ಕೆಲಸ ಮಾಡುತ್ತಿದ್ದ ಅಹ್ಮದ್ ರಜಾಕ್ ಕಳೆದ ರಾತ್ರಿ 9 ಗಂಟೆ ಸಮಯದಲ್ಲಿ ಹಳೆ ಹುಬ್ಬಳ್ಳಿ ನಿವಾಸಿ ಸದ್ದಾಂ ಎಂಬಾತ ಕಲ್ಲಿನಿಂದ ಎದೆ ಸೇರಿದಂತೆ ತಲೆಗೆ ಹೊಡೆದಿದ್ದ. ಸ್ಥಳದಲ್ಲಿಯೇ ಕುಸಿದು ಬಿದ್ದಿದ್ದ ಅಹ್ಮದ್ ರಜಾಕ್‌ನನ್ನ ಕೂಡಲೇ ಹುಬ್ಬಳ್ಳಿ ಕಿಮ್ಸ್‌ಗೆ ಕರೆದುಕೊಂಡು ಬರಲಾಗಿತ್ತು. ಆದರೆ ಆಸ್ಪತ್ರೆ ಸೇರುವ ಮುನ್ನವೇ ಅಹ್ಮದ್ ರಜಾಕ್ ಕೊನೆಯುಸಿರೆಳೆದಿದ್ದ. ಇನ್ನು ಅಹ್ಮದ್ ರಜಾಕ್‌ನನ್ನು ಕೊಲೆ ಮಾಡಿರುವ ಸದ್ದಾಂ ಬೇರಾರು ಅಲ್ಲಾ, ಸಹೋದರನ ಮಗಳ ಗಂಡ. ಬುದ್ಧಿ ಮಾತು ಹೇಳಿದ್ದಕ್ಕೆ ಸದ್ದಾಂ, ಅಹ್ಮದ್ ರಜಾಕ್‌ನನ್ನ ಕೊಲೆ ಮಾಡಿದ್ದಾನೆ.



ಕೊಲೆಯಾದ ಅಹ್ಮದ್ ರಜಾಕ್, ಗೌಸಿಯಾ ಟೌನ್‌ನಲ್ಲಿರುವ ಸ್ವಂತ ಮನೆಯಲ್ಲಿ ವಾಸವಾಗಿದ್ದು, ಕಳೆಗಿನ ಮನೆಯಲ್ಲಿ ತಾನಿದ್ದರೆ, ಮೇಲಿನ ಮಹಡಿಯಲ್ಲಿ ಆತನ ಸಹೋದರ ಇಮ್ರಾನ್ ವಾಸವಾಗಿದ್ದ. ಇಮ್ರಾನ್‌ನ ಪುತ್ರಿ ನೇಹಾ ಮದುವೆ ಆರು ವರ್ಷದ ಹಿಂದೆ ಸದ್ದಾಂ ಜೊತೆ ಆಗಿತ್ತು. ಆದರೆ ಮದುವೆಯಾದ ನಂತರ ಸದ್ದಾಂ ಮತ್ತು ನೇಹಾ ನಡುವೆ ಪ್ರತಿನಿತ್ಯ ಜಗಳ ವಾಗುತ್ತಿತ್ತಂತೆ. ಹೀಗಾಗಿ ನೇಹಾ ಎರಡು ತಿಂಗಳ ಹಿಂದಷ್ಟೇ ತವರು ಮನೆಗೆ ಬಂದಿದ್ದಳು. ಕಳೆದ ರಾತ್ರಿ ಸದ್ದಾಂ ಮತ್ತು ಆತನ ಕುಟುಂಬದವರು ಇಮ್ರಾನ್ ಮನೆಗೆ ಆಗಮಿಸಿದ್ದರು. ಮನೆಯೊಳಗೆ ಬಾರದೇ ಸದ್ದಾಂ ಹೊರಗಡೆ ನಿಂತು ಗಲಾಟೆ ಮಾಡುತ್ತಿದ್ದ. ಇದನ್ನು ನೋಡಿದ ಅಹ್ಮದ್ ರಜಾಕ್, ಮನೆಯೊಳಗ ಬಂದು ಕೂತು ಮಾತನಾಡಿ. ಸಮಸ್ಯೆಯನ್ನು ಜಮಾತ್‌ಗೆ ಹೋಗಿ ಅಲ್ಲಿ ಹಿರಿಯರ ಮುಂದಿಟ್ಟು ಬಗೆಹರಿಸಿ ಕೊಳ್ಳೋಣ ಅಂತ ಬುದ್ಧಿ ಹೇಳಿದ್ದನಂತೆ.



ಇದರಿಂದ ಕೆರಳಿದ ಸದ್ದಾಂ, ಅಹ್ಮದ್ ರಜಾಕ್ ನನ್ನು ಮನೆಯಿಂದ ಹೊರಗಡೆ ಎಳೆದುಕೊಂಡು ಬಂದು, ಹಲ್ಲೆ ಮಾಡಿದ್ದನಂತೆ. ಜೊತೆಗೆ ಜೋರು ಗಲಾಟೆಯಲ್ಲಿ ತಳ್ಳಾಟ ನೂಕಾಟ ಕೂಡ ನಡೆದಿಯಂತೆ. ಈ ವೇಳೆ ಕೈನಿಂದ ಎದೆಗೆ ಹೊಡೆದಿದ್ದು, ಅಷ್ಟೇ ಅಲ್ಲದೆ ತನ್ನ ಬಳಿಯಿದ್ದ ಕೀಯಿಂದ ಸದ್ದಾಂ, ಅಹ್ಮದ್ ರಜಾಕ್ ಮೇಲೆ ಹಲ್ಲೆ ಮಾಡಿದ್ದನಂತೆ. ಈ ಗಲಾಟೆಯಲ್ಲಿ ಅಹ್ಮದ್ ರಜಾಕ್ ಮೃತಪಟ್ಟಿದ್ದಾನೆ.

ಇನ್ನು ಅಹ್ಮದ್ ರಜಾಕ್‌ಗೆ ಮೂವರು ಪುತ್ರಿಯರಿದ್ದು, ಓರ್ವ ಪುತ್ರಿಯ ಮದುವೆ ಮಾತ್ರವಾಗಿದೆ. ಇನ್ನಿಬ್ಬರು ಮಕ್ಕಳ ಮದುವೆ ಸೇರಿದಂತೆ ಮನೆಯ ಖರ್ಚು, ವೆಚ್ಚಕ್ಕಾಗಿ ಅಹ್ಮದ್ ರಜಾಕ್ ಪ್ರತಿನಿತ್ಯ ಕೆಲಸ ಮಾಡುತ್ತಿದ್ದ. ಆದರೆ ಸಹೋದರನ ಮಗಳ ವಿಷಯದಲ್ಲಿ ಬುದ್ಧಿ ಹೇಳಲು ಹೋಗಿ ಕೊಲೆಯಾಗಿದ್ದಾನೆ.

ಸದ್ಯ ಘಟನೆಗೆ ಸಂಬಂಧಿಸಿದಂತೆ ಕಸಬಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಪೊಲೀಸರು ಸದ್ದಾಂ ಸೇರಿದಂತೆ ಆತನ ಕುಟುಂಬದ ಐವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆ. ಮತ್ತೊಂದಡೆ ಅಹ್ಮದ್ ರಜಾಕ್ ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದ್ದು, ವರದಿ ಬಂದ ನಂತರ ಅಹ್ಮದ್ ರಜಾಕ್ ಹಲ್ಲೆ ಮಾಡಿದ್ದರಿಂದಲೇ ಮೃತಪಟ್ಟರಾ ಅಥವಾ ಹೃದಯಾಘಾತದಿಂದ ಮೃತಪಟ್ಟಿರೋದಾ ಅನ್ನೋದು ಗೊತ್ತಾಗಲಿದೆ. ಸಮಸ್ಯೆಯನ್ನು ಕೂತು ಮಾತನಾಡಿ ಬಗೆಹರಿಸಿಕೊಂಡಿದ್ದರೆ ಸಂಸಾರ ಸರಿಹೋಗುತ್ತಿತ್ತು. ಆದರೆ ಸದ್ದಾಂ ಸಿಟ್ಟಿನಲ್ಲಿ ಅಹ್ಮದ್ ರಜಾಕ್ ಮೇಲೆ ಹಲ್ಲೆ ಮಾಡಿ ಸಂಕಷ್ಟವನ್ನು ತಂದುಕೊಂಡಿದ್ದು ಮಾತ್ರ ದುರ್ದೈವದ ವಿಚಾರ.

## ಪತ್ನಿಯನ್ನು ಕೊಂದು ತಾನೂ ಗುಂಡು ಹಾರಿಸಿಕೊಂಡು ಆತ್ಮಹತ್ಯೆ



**ಅಹಮದಾಬಾದ್:** ವ್ಯಕ್ತಿಯೊಬ್ಬ ಪತ್ನಿಯನ್ನು ಕೊಂದು ಕೊನೆಗೆ ತಾನೂ ಗುಂಡು ಹಾರಿಸಿಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಗುಜರಾತ್‌ನ ಅಹಮದಾಬಾದ್‌ನಲ್ಲಿ ನಡೆದಿದೆ. ಗುಜರಾತ್ ಕಾಂಗ್ರೆಸ್ ನಾಯಕ ಮತ್ತು ರಾಜ್ಯಸಭಾ ಸಂಸದ ಶಕ್ತಿಸಿನ್ಹ ಗೋಹಿಲ್ ಅವರ ಸೋದರಳಿಯ ಯಶ್‌ರಾಜ್ ಗೋಹಿಲ್, ತನ್ನ ಪತ್ನಿ ರಾಜೇಶ್ವರಿ ಜಡೇಜಾ ಅವರನ್ನು ಪರವಾನಗಿ ಪಡೆದ ಬಂದೂಕಿನಿಂದ ಗುಂಡು ಹಾರಿಸಿಕೊಂಡು ನಂತರ ತನ್ನ ಮೇಲೆಯೇ ಗುಂಡು ಹಾರಿಸಿಕೊಂಡಿದ್ದಾನೆ ಎಂದು ವರದಿಯಾಗಿದೆ.

ಮೂಲತಃ ಭಾವನಗರದ ಈ ದಂಪತಿ ಎರಡು ತಿಂಗಳ ಹಿಂದೆ ಮದುವೆಯಾದ ನಂತರ ಅಹಮದಾಬಾದ್‌ನಲ್ಲಿ ನೆಲೆಸಿದ್ದರು. ಇಬ್ಬರೂ ಈ ಹಿಂದೆ ಮದುವೆಯಾಗಿದ್ದರು, ಮತ್ತು ಇದು ಇಬ್ಬರಿಗೂ ಎರಡನೇ ವಿವಾಹವಾಗಿತ್ತು.

ಪೊಲೀಸ್ ಪ್ರಾಥಮಿಕ ವರದಿಗಳ ಪ್ರಕಾರ, ಮಂಗಳವಾರ ರಾತ್ರಿ ದಂಪತಿ ಊಟ ಮುಗಿಸಿ ಮನೆಗೆ ಹಿಂದಿರುಗಿದ ನಂತರ ಈ ಘಟನೆ ನಡೆದಿದೆ. ಯಶ್‌ರಾಜ್, ರಾಜೇಶ್ವರಿ (30) ಅವರನ್ನು ಹತ್ಯೆ ಮಾಡಲು ತಮ್ಮ ಮನೆಯಲ್ಲಿ ಇರಿಸಲಾಗಿದ್ದ ಪರವಾನಗಿ ಪಡೆದ ಬಂದೂಕನ್ನು ಬಳಸಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಪೊಲೀಸರ ಪ್ರಕಾರ, ರಾಜೇಶ್ವರಿ ಅವರ ತಲೆಯ ಹಿಂಭಾಗಕ್ಕೆ ಗುಂಡು ಹಾರಿಸಲಾಗಿತ್ತು ಮತ್ತು ಯಶ್ರಾಜ್ ಕೂಡ ತಲೆಗೆ ಗುಂಡೇಟಿನಿಂದ ಸಾವನ್ನಪ್ಪಿದ್ದಾರೆ. ತುರ್ತು ವೈದ್ಯಕೀಯ ಸಿಬ್ಬಂದಿ ಸ್ಥಳದಲ್ಲೇ ರಾಜೇಶ್ವರಿ ಸಾವನ್ನು ದೃಢಪಡಿಸಿದ್ದಾರೆ. ರಾಜೇಶ್ವರಿ ಮೃತಪಟ್ಟ ಬಳಿಕ, ಸ್ವಲ್ಪ ಸಮಯದ ನಂತರ, ಯಶ್ರಾಜ್ ತನ್ನ ಪ್ರಾಣವನ್ನು ತಾನೇ ಕೊನೆಗೊಳಿಸಲು ಅದೇ ಪಿಸ್ತೂಲ್ ಬಳಸಿದ್ದಾರೆಂದು ವರದಿಯಾಗಿದೆ. ಯಶ್‌ರಾಜ್ ಮನೆಯಲ್ಲಿ ಬಂದೂಕನ್ನು ಹೇಗೆ ಮತ್ತು ಏಕೆ ಇಟ್ಟುಕೊಂಡಿದ್ದನು ಎಂಬುದರ ಜೊತೆಗೆ, ಸಾವಿಗೆ ಕಾರಣವಾದ ಸಂದರ್ಭಗಳನ್ನು ಕಂಡುಹಿಡಿಯಲು ತನಿಖೆ ನಡೆಯುತ್ತಿದೆ.

## ಬಾರ್ ಮಾಲೀಕನ ಕೊಲೆ: ನಾಲ್ವರು ಪೊಲೀಸರ ವಶ




**ಚಿಕ್ಕಮಗಳೂರು:**ನಗರದಲ್ಲಿ ನಡೆದಿದ್ದ ಬಾರ್ ಮಾಲೀಕನ ಭೀಕರ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಮಹತ್ವದ ಯಶಸ್ಸು ಸಾಧಿಸಿದ್ದು, ನಾಲ್ವರು ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಈ ಘಟನೆ ಚಿಕ್ಕಮಗಳೂರು ನಗರವನ್ನು ಬೆಚ್ಚಿಬೀಳಿಸಿದ್ದರೆ, ಇದೀಗ ಆರೋಪಿಗಳ ಬಂಧನದಿಂದ ಪ್ರಕರಣಕ್ಕೆ ಹೊಸ ತಿರುವು ದೊರೆತಿದೆ.

ಪೊಲೀಸರ ಮಾಹಿತಿ ಪ್ರಕಾರ, ಬಂಧಿತ ಆರೋಪಿಗಳನ್ನು ಕೊಲ್ಕತ್ತಾ ಮೂಲದ ರುದ್ರ, ಆಂಧ್ರ ಪ್ರದೇಶದ ಅದೋನಿಯ ವೀರ ಶೇಖರ್, ತುಮಕೂರು ಮೂಲದ ವಿನಿ ಹಾಗೂ ಚಿಕ್ಕಮಗಳೂರು ನಗರದ ಸ್ಥಳೀಯ ನಿವಾಸಿ ಹನುಮಂತ ಎಂದು ಗುರುತಿಸಲಾಗಿದೆ. ಈ ನಾಲ್ವರು ಸೇರಿಕೊಂಡು ಜ.20ರಂದು ನಗರದ ಒಂದು ಬಾರ್ ಮಾಲೀಕರಾದ ತೇಜಸ್ವಿ ಅವರ ಮೇಲೆ ಕ್ಷುಲ್ಲಕ ಕಾರಣಕ್ಕೆ ಜಗಳವಾಡಿ, ತೀವ್ರವಾಗಿ ಹಲ್ಲೆ ನಡೆಸಿದ್ದಾರೆ ಎನ್ನಲಾಗಿದೆ.



ಹಲ್ಲೆಯ ಪರಿಣಾಮ ತೇಜಸ್ವಿ ಅವರು ಪ್ರಜ್ಞೆ ತಪ್ಪಿ ಬಿದ್ದ ಬಳಿಕವೂ ಆರೋಪಿಗಳು ಕ್ರೂರತೆ ತೋರಿದ್ದು, ಅವರನ್ನು ಸುಮಾರು 1 ಕಿಲೋಮೀಟರ್ ದೂರದ ಬಯಲು ಪ್ರದೇಶಕ್ಕೆ ಎಳೆದೊಯ್ದು ಅಲ್ಲೇ ಬಿಟ್ಟು ಪರಾರಿಯಾಗಿದ್ದಾರೆ. ಗಂಭೀರವಾಗಿ ಗಾಯಗೊಂಡಿದ್ದ ತೇಜಸ್ವಿ ಅವರು ಪ್ರಜ್ಞಾಹೀನ ಸ್ಥಿತಿಯಲ್ಲಿ ಬಯಲಲ್ಲಿ ಬಿದ್ದಿದ್ದರು ಎಂದು ತಿಳಿದುಬಂದಿದೆ.

ಆಟೋ ಚಾಲಕರೊಬ್ಬರು ಬಯಲು ಪ್ರದೇಶದ ಮೂಲಕ ಹೋಗುವಾಗ ತೇಜಸ್ವಿ ಅವರು ಇನ್ನೂ ಉಸಿರಾಡುತ್ತಿದ್ದುದನ್ನು ಗಮನಿಸಿದ್ದಾರೆ. ತಕ್ಷಣ ಮಾನವೀಯತೆ ತೋರಿದ ಚಾಲಕ, ಸ್ಥಳೀಯರ ಸಹಾಯದಿಂದ ಅವರನ್ನು ಸಮೀಪದ ಆಸ್ಪತ್ರೆಗೆ ದಾಖಲಿಸಿದ್ದಾರೆ. ಆದರೆ ವೈದ್ಯರು ತೀವ್ರ ಚಿಕಿತ್ಸೆ ನೀಡಿದರೂ ಚಿಕಿತ್ಸೆ ಫಲಕಾರಿಯಾಗದೆ ತೇಜಸ್ವಿ ಅವರು ಆಸ್ಪತ್ರೆಯಲ್ಲಿ ಸಾವನ್ನಪ್ಪಿದ್ದಾರೆ.

ಈ ಘಟನೆಗೆ ಸಂಬಂಧಿಸಿದಂತೆ ಮೃತ ತೇಜಸ್ವಿ ಅವರ ಸಹೋದರರು ಚಿಕ್ಕಮಗಳೂರು ನಗರ ಪೊಲೀಸ್ ಠಾಣೆಗೆ ದೂರು ದಾಖಲಿಸಿದ್ದರು. ದೂರಿನ ಆಧಾರದ ಮೇಲೆ ಪ್ರಕರಣ ದಾಖಲಿಸಿಕೊಂಡ ಪೊಲೀಸರು, ತಕ್ಷಣವೇ ತನಿಖೆ ಆರಂಭಿಸಿ ತಾಂತ್ರಿಕ ಸಾಕ್ಷ್ಯಗಳು, ಸಿಸಿಟಿವಿ ದೃಶ್ಯಗಳು ಹಾಗೂ ಸ್ಥಳೀಯ ಮಾಹಿತಿ ಆಧರಿಸಿ ಆರೋಪಿಗಳನ್ನು ಪತ್ತೆಹಚ್ಚುವಲ್ಲಿ ಯಶಸ್ವಿಯಾಗಿದ್ದಾರೆ.

ಪೊಲೀಸರ ವಿಚಾರಣೆ ವೇಳೆ ನಾಲ್ವರು ಆರೋಪಿಗಳು ತಾವೇ ಹಲ್ಲೆ ನಡೆಸಿ ಕೊಲೆ ಮಾಡಿರುವುದಾಗಿ ಒಪ್ಪಿಕೊಂಡಿದ್ದಾರೆ ಎಂದು ತಿಳಿದುಬಂದಿದೆ. ಈ ಪ್ರಕರಣದ ಹಿಂದೆ ಇನ್ನೂ ಯಾರಾದರೂ ಭಾಗಿಯಾಗಿದ್ದಾರೆಯೇ, ಕೊಲೆಗೆ ನಿಖರ ಕಾರಣವೇನು ಎಂಬುದರ ಬಗ್ಗೆ ಪೊಲೀಸರು ಹೆಚ್ಚಿನ ತನಿಖೆ ಮುಂದುವರಿಸಿದ್ದಾರೆ.

## ವಿದೇಶಿ ಮಹಿಳೆಗೆ ಲೈಂಗಿಕ ಕಿರುಕುಳ: ಏರ್‌ಪೋರ್ಟ್ ಸಿಬ್ಬಂದಿ ಅರೆಸ್ಟ್

ಬೆಂಗಳೂರು: ದೇಶದ ಪ್ರಮುಖ ಅಂತರಾಷ್ಟ್ರೀಯ ವಿಮಾನ ನಿಲ್ದಾಣಗಳಲ್ಲಿ ಒಂದಾಗಿರುವ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಸಿಬ್ಬಂದಿಯೊಬ್ಬರು ಟಿಕೆಟ್ ಮತ್ತು ಲಗೇಜುಗಳನ್ನು ಪರಿಶೀಲಿಸುವ ನೆಪದಲ್ಲಿ ಲೈಂಗಿಕ ಕಿರುಕುಳ ನೀಡಿದ್ದಾರೆ ಎಂದು ಕೊರಿಯಾದ ಪ್ರವಾಸಿಯೊಬ್ಬರು ಆರೋಪಿಸಿದ್ದಾರೆ.



ಭದ್ರತಾ ತಪಾಸಣೆ ಹೆಸರಿನಲ್ಲಿ ವಿದೇಶಿ ಮಹಿಳೆಯನ್ನು ಶೌಚಾಲಯಕ್ಕೆ ಕರೆದೊಯ್ದು ಅಸಭ್ಯವಾಗಿ ವರ್ತಿಸಿದ ಆರೋಪದಡಿ ಏರ್‌ಪೋರ್ಟ್ ಸಿಬ್ಬಂದಿಯನ್ನು ಪೊಲೀಸರು ಬಂಧಿಸಿದ್ದಾರೆ.

ಬಂಧಿತ ಆರೋಪಿಯನ್ನು ಎಫ್.ಡಿ. ಅಪ್ಪನ್ ಅಹ್ಮದ್ ಎಂದು ಗುರುತಿಸಲಾಗಿದೆ. ಈತನ ವಿರುದ್ಧ ದಕ್ಷಿಣ ಕೊರಿಯಾ ಮೂಲದ 36 ವರ್ಷದ ಮಹಿಳೆ ದೂರು ದಾಖಲಿಸಿದ್ದಾರೆ. ಪ್ರವಾಸದ ಉದ್ದೇಶದಿಂದ ಭಾರತಕ್ಕೆ ಬಂದಿದ್ದ ಆ ಮಹಿಳೆ, ತಮ್ಮ ಪ್ರವಾಸ ಮುಗಿಸಿ ಸ್ವದೇಶಕ್ಕೆ ಹಿಂತಿರುಗಲು ಬೆಂಗಳೂರಿನ ಕೆಂಪೇಗೌಡ ವಿಮಾನ ನಿಲ್ದಾಣಕ್ಕೆ ಆಗಮಿಸಿದ್ದರು.

ಎಲ್ಲಾ ಭದ್ರತಾ ತಪಾಸಣೆ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಿ ಬೋರ್ಡಿಂಗ್ ಗೇಟ್ ಕಡೆಗೆ ಸಾಗುತ್ತಿದ್ದ ವೇಳೆ, ಸಿಬ್ಬಂದಿ ಅಪ್ಪನ್ ಅಹ್ಮದ್ ಮಹಿಳೆಯನ್ನು ತಡೆದು ನಿಲ್ಲಿಸಿದ್ದಾನೆ. ಅವರ ಬ್ಯಾಗೇಜ್ ಪರಿಶೀಲನೆ ಅಗತ್ಯವಿದೆ ಎಂದು ಹೇಳಿ ಮರುತಪಾಸಣೆಗೆ ಒಳಪಡಿಸಿದ್ದಾನೆ. ಇದಾದ ಬಳಿಕ ವೈಯಕ್ತಿಕ ತಪಾಸಣೆ ನಡೆಸಬೇಕೆಂದು ಹೇಳಿ ಮಹಿಳೆಯನ್ನು ಪ್ರತ್ಯೇಕ ಸ್ಥಳಕ್ಕೆ ಕರೆದೊಯ್ದಿದ್ದಾನೆ.

ಆದರೆ, ಆರೋಪಿಯು ಮಹಿಳೆಯನ್ನು ಪುರುಷರ ಶೌಚಾಲಯಕ್ಕೆ ಕರೆದೊಯ್ದು ಅಲ್ಲಿ ಅಸಭ್ಯವಾಗಿ ವರ್ತಿಸಿದ್ದಾನೆ ಎಂಬುದು ದೂರಿನಲ್ಲಿ ತಿಳಿಸಲಾಗಿದೆ. ಮಹಿಳೆಯ ಮೈ-ಕೈ ಮುಟ್ಟುವುದು, ತಬ್ಬಿಕೊಳ್ಳಲು ಯತ್ನಿಸುವುದು ಸೇರಿದಂತೆ ಗಂಭೀರ ಲೈಂಗಿಕ ಕಿರುಕುಳ ನೀಡಿದ್ದಾನೆ ಎನ್ನಲಾಗಿದೆ. ಈ ವರ್ತನೆಯಿಂದ ಮಹಿಳೆ ತೀವ್ರ ಆತಂಕಕ್ಕೊಳಗಾಗಿದ್ದು, ತಕ್ಷಣವೇ ಅಲ್ಲಿಂದ ಹೊರಬಂದು ಸಿಐಎಸ್‌ಎಫ್ ಸಿಬ್ಬಂದಿಗೆ ವಿಷಯ ತಿಳಿಸಿದ್ದಾಳೆ.

ಸಿಐಎಸ್‌ಎಫ್ ಅಧಿಕಾರಿಗಳು ತಕ್ಷಣ ಸ್ಥಳಕ್ಕೆ ಧಾವಿಸಿ ಆರೋಪಿಯನ್ನು ವಶಕ್ಕೆ ಪಡೆದಿದ್ದಾರೆ. ಬಳಿಕ ವಿಮಾನ ನಿಲ್ದಾಣ ಪೊಲೀಸರಿಗೆ ಮಾಹಿತಿ ನೀಡಿದ್ದು, ಪೊಲೀಸರು ಆರೋಪಿಯನ್ನು ಬಂಧಿಸಿ ಪ್ರಕರಣ ದಾಖಲಿಸಿದ್ದಾರೆ. ಪೊಲೀಸರು ಆರೋಪಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು, ನ್ಯಾಯಾಲಯ ಆತನನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ. ತನಿಖೆ ಮುಂದುವರಿದಿದ್ದು, ಸಿಸಿಟಿವಿ ದೃಶ್ಯಾವಳಿಗಳು ಹಾಗೂ ಇತರ ಸಾಕ್ಷ್ಯಾಧಾರಗಳನ್ನು ಪರಿಶೀಲಿಸಲಾಗುತ್ತಿದೆ.

## ಸೈಕಲ್‌ಗೆ ಕಾರು ಡಿಕ್ಕಿ – ಕಾಲೇಜು ವಿದ್ಯಾರ್ಥಿ ದುರ್ಮರಣ




**ಹಾಸನ:** ಕಾಲೇಜಿಗೆ ತೆರಳುತ್ತಿದ್ದ ವಿದ್ಯಾರ್ಥಿಯೊಬ್ಬರು ಸೈಕಲ್‌ಗೆ ಕಾರು ಡಿಕ್ಕಿಯಾದ ಪರಿಣಾಮ ಸ್ಥಳದಲ್ಲೇ ಸಾವನ್ನಪ್ಪಿದ ಹೃದಯವಿದ್ರಾವಕ ಘಟನೆ ಹಾಸನ ಜಿಲ್ಲೆಯ ಚನ್ನರಾಯಪಟ್ಟಣ ತಾಲ್ಲೂಕಿನ ಮಾಳೇಕೊಪ್ಪಲು ಬಳಿಯ ಫ್ಲೈಓವರ್ ಮೇಲೆ ನಡೆದಿದೆ. ಈ ದುರ್ಘಟನೆಯಿಂದ ಇಡೀ ಪ್ರದೇಶದಲ್ಲಿ ಶೋಕದ ವಾತಾವರಣ ಆವರಿಸಿದೆ.



ಅಪಘಾತದಲ್ಲಿ ಮೃತಪಟ್ಟ ವದ್ಯಾರ್ಥಿ ಯನ್ನು ಸಂಜು (16) ಎಂದು ಗುರುತಿಸಲಾಗಿದೆ. ಸಂಜು ಹಾಸನ ಜಿಲ್ಲೆಯ ಹೊನ್ನಶೆಟ್ಟಿಹಳ್ಳಿಯ ಗ್ರಾಮದ ಗಿರೀಶ್ ಅವರ ಪುತ್ರನಾಗಿದ್ದು, ಕಾಲೇಜು ವಿದ್ಯಾರ್ಥಿಯಾಗಿದ್ದನು. ದಿನನಿತ್ಯದಂತೆ ಸಂಜು ತನ್ನ ಅಜ್ಜಿ ಮನೆಯಿಂದ ಸೈಕಲ್‌ನಲ್ಲಿ ಕಾಲೇಜಿಗೆ ತೆರಳುತ್ತಿದ್ದ ವೇಳೆ ಈ ದುರ್ಘಟನೆ ಸಂಭವಿಸಿದೆ ಎಂದು ತಿಳಿದುಬಂದಿದೆ.

ಪ್ರತ್ಯಕ್ಷದರ್ಶಿಗಳ ಮಾಹಿತಿಯಂತೆ, ಫ್ಲೈಓವರ್ ಬಳಿ ರಸ್ತೆ ದಾಟುವ ಸಂದರ್ಭದಲ್ಲಿ ಅತೀವೇಗದಲ್ಲಿ ಬಂದ ಕಾರೊಂದು ನಿಯಂತ್ರಣ ತಪ್ಪಿ ಸಂಜು ಸವಾರನಾಗಿದ್ದ ಸೈಕಲ್‌ಗೆ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ವಿದ್ಯಾರ್ಥಿ ದೂರಕ್ಕೆ ಎಸೆಯಲ್ಪಟ್ಟು ಗಂಭೀರ ಗಾಯಗೊಂಡಿದ್ದು, ಸ್ಥಳದಲ್ಲೇ ಪ್ರಾಣ ಕಳೆದುಕೊಂಡಿದ್ದಾನೆ. ಅಪಘಾತದ ತೀವ್ರತೆಯಿಂದ ಸ್ಥಳದಲ್ಲಿದ್ದವರು ಬೆಚ್ಚಿಬಿದ್ದಿದ್ದಾರೆ.

ಘಟನೆಯ ಸುದ್ದಿ ತಿಳಿಯುತ್ತಿದ್ದಂತೆಯೇ ಮೃತ ವಿದ್ಯಾರ್ಥಿಯ ಪೋಷಕರು ಹಾಗೂ ಕುಟುಂಬಸ್ಥರು ಸ್ಥಳಕ್ಕೆ ಧಾವಿಸಿದ್ದು, ಪುತ್ರನನ್ನು ಕಳೆದುಕೊಂಡ ದುಃಖದಲ್ಲಿ ಅವರ ಆಕ್ರಂದನ ಮುಗಿಲು ಮುಟ್ಟಿದೆ. ಕಿರಿಯ ವಯಸ್ಸಿನಲ್ಲೇ ಭವಿಷ್ಯವಿದ್ದ ವಿದ್ಯಾರ್ಥಿಯೊಬ್ಬನು ರಸ್ತೆ ಅಪಘಾತದಲ್ಲಿ ಸಾವನ್ನಪ್ಪಿರುವುದು ಎಲ್ಲರ ಮನಕಲಕುವಂತೆ ಮಾಡಿದೆ.

ಅಪಘಾತದ ಮಾಹಿತಿ ದೊರಕಿದ ತಕ್ಷಣ ಚನ್ನರಾಯಪಟ್ಟಣ ಸಂಚಾರಿ ಪೊಲೀಸ್ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಅಪಘಾತಕ್ಕೆ ಕಾರಣವಾದ ಕಾರಿನ ಚಾಲಕನ ಕುರಿತು ಮಾಹಿತಿ ಸಂಗ್ರಹಿಸಲಾಗುತ್ತಿದ್ದು, ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಳ್ಳಲಾಗಿದೆ.

## ಮಠದ ಸ್ವಾಮೀಜಿಗೆ ಬ್ಲ್ಯಾಕ್‌ಮೇಲ್ ಕೇಸ್

**ಬೆಂಗಳೂರು:** ರಾಜ್ಯದ ಪ್ರತಿಷ್ಠಿತ ಮಠದ ಸ್ವಾಮೀಜಿಯೊಬ್ಬರಿಗೆ ಬ್ಲ್ಯಾಕ್‌ಮೇಲ್ ಮಾಡಿ ಹಣ ವಸೂಲಿ ಮಾಡಿದ ಆರೋಪದ ಮೇಲೆ ಚಿಕ್ಕಮಗಳೂರು ಮೂಲದ ಸ್ಫೂರ್ತಿ ಎಂಬ ಮಹಿಳೆಯನ್ನು ಬೆಂಗಳೂರು ಸಿಸಿಬಿ ಪೊಲೀಸರು ಬಂಧಿಸಿದ್ದಾರೆ. ಸ್ವಾಮೀಜಿಯಿಂದ ಈಗಾಗಲೇ 4.5 ಲಕ್ಷ ರೂ. ವಸೂಲಿ ಮಾಡಿಕೊಂಡಿದ್ದ ಆರೋಪಿ, ಮತ್ತೆ 1 ಕೋಟಿ ರೂ. ನೀಡುವಂತೆ ಒತ್ತಡ ಹೇರಿದ್ದಳು ಎನ್ನಲಾಗಿದೆ. ಐದು ತಿಂಗಳ ಹಿಂದೆ ಸ್ವಾಮೀಜಿಗೆ ಕರೆ ಮಾಡಿದ ಸ್ಫೂರ್ತಿ, ತಿಪಟೂರಿನಲ್ಲಿ ವ್ಯಾಸಂಗ ಮಾಡಿದ್ದೇನೆ ಎಂದು ಪರಿಚಯಿಸಿಕೊಂಡಿದ್ದಳು. ಬಳಿಕ ಹಣಕ್ಕೆ ಬೇಡಿಕೆ ಇಟ್ಟು, ಹಣ ಕೊಡದಿದ್ದರೆ ಮಾನಹಾನಿ ಮಾಡುವುದಾಗಿ ಹಾಗೂ ಜೀವ ಬೆದರಿಕೆ ಹಾಕಿದ್ದಳು.



ಸ್ವಾಮೀಜಿ ಬೆಂಗಳೂರಿಗೆ ಬಂದಿದ್ದಾಗ ಅವರಿಂದ 4.5 ಲಕ್ಷ ರೂ. ಪಡೆದುಕೊಂಡರೂ, ಮತ್ತೆ 1 ಕೋಟಿ ರೂ. ಕೊಡಬೇಕೆಂದು ತನ್ನ ಸಹಚರರ ಜೊತೆಗೂಡಿ ಬೆದರಿಕೆ ಮುಂದುವರಿಸಿದ್ದಳು.

**ಕಾಟ ತಾಳಲಾರದೆ ಸಿಸಿಬಿ ಪೊಲೀಸರಿಗೆ ದೂರು ನೀಡಿದ್ದ ಸ್ವಾಮೀಜಿ:**ಆರೋಪಿ ಮಹಿಳೆ ಮತ್ತೆ ಮತ್ತೆ ಹಣಕ್ಕಾಗಿ ಬೇಡಿಕೆ ಇಟ್ಟು ಬೆದರಿಕೆ ಹಾಕಿದ್ದರಿಂದ ಆತಂಕಗೊಂಡ ಸ್ವಾಮೀಜಿ ಸಿಸಿಬಿ ಪೊಲೀಸರ ಮೊರೆ ಹೋಗಿದ್ದರು. ಪ್ರಕರಣ ದಾಖಲಿಸಿಕೊಂಡ ಪೊಲೀಸರು ತನಿಖೆ ನಡೆಸಿ ಸ್ಫೂರ್ತಿಯನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

**ಎರಡು ವರ್ಷ ಹಿಂದೆಯೂ ನಡೆದಿತ್ತು ಹನಿಟ್ರ್ಯಾಪ್ ಯತ್ನ:**ಇದೇ ಸ್ವಾಮೀಜಿ ವಿರುದ್ಧ ಎರಡು ವರ್ಷಗಳ ಹಿಂದೆ ಹನಿಟ್ರ್ಯಾಪ್ ಯತ್ನ ನಡೆದಿತ್ತು. ಆ ವೇಳೆ 6 ಕೋಟಿ ರೂ. ಬೇಡಿಕೆ ಇಟ್ಟಿದ್ದ ಮೂವರನ್ನು ಸಿಸಿಬಿ ಪೊಲೀಸರು ಬಂಧಿಸಿದ್ದರು. ಇದೀಗ ಮತ್ತೆ ಬ್ಲ್ಯಾಕ್‌ಮೇಲ್ ಕಾಟ ಎದುರಾಗಿದೆ.

ಸದ್ಯ ಬ್ಲ್ಯಾಕ್‌ಮೇಲ್ ಪ್ರಕರಣದ ಹಿನ್ನೆಲೆಯಲ್ಲಿ ಸ್ವಾಮೀಜಿ ಕೋರ್ಟ್ ಮೊರೆ ಹೋಗಿದ್ದು, ತಮಗೆ ಸಂಬಂಧಿಸಿದ ಯಾವುದೇ ಫೋಟೋಗಳು ಹಾಗೂ ವಿಡಿಯೋಗಳನ್ನು ಪ್ರಸಾರ ಮಾಡದಂತೆ ತಡೆಯಾಜ್ಞೆ ಪಡೆದಿದ್ದಾರೆ. ಪ್ರಕರಣದ ತನಿಖೆ ಮುಂದುವರಿದಿದೆ.

## ಮುಸ್ಲಿಂ ಯುವಕನನ್ನು ಪ್ರೀತಿಸಿದ್ದಕ್ಕೆ ತಂಗಿಯನ್ನೂ ಬಿಡದೇ ಕೊಂದ ಸಹೋದರರು

**ಉತ್ತರ ಪ್ರದೇಶ:** ಮೊರಾದಾಬಾದ್ ಜಿಲ್ಲೆಯ ಉಮ್ರಿ ಸಬ್ಜೀಪುರ ಗ್ರಾಮದಲ್ಲಿ ಅಂತರ್ಧರ್ಮೀಯ ಪ್ರೀತಿಯನ್ನು ವಿರೋಧಿಸಿ ನಡೆದ ಭೀಕರ ಮರ್ಯಾದಾ ಹತ್ಯೆ ಪ್ರಕರಣ ದೇಶಾದ್ಯಂತ ಸಂಚಲನ ಮೂಡಿಸಿದೆ. 22 ವರ್ಷದ ಹಿಂದೂ ಯುವತಿ ಕಾಜಲ್ ಸೈನಿ ಹಾಗೂ 27 ವರ್ಷದ ಮುಸ್ಲಿಂ ಯುವಕ ಮೊಹಮ್ಮದ್ ಅರ್ಮಾನ್ ಅವರನ್ನು ಕಾಜಲ್‌ರ ಸಹೋದರರು ಅಮಾನುಷವಾಗಿ ಹತ್ಯೆ ಮಾಡಿರುವುದು ತನಿಖೆಯಲ್ಲಿ ಬಹಿರಂಗವಾಗಿದೆ. ಪ್ರೀತಿಯ ಕಾರಣಕ್ಕೆ ಇಬ್ಬರನ್ನು ಕೈಕಾಲು ಕಟ್ಟಿಹಾಕಿ ಗುದ್ದಲಿಯಿಂದ ಕೊಚ್ಚಿ ಕೊಂದ ಆರೋಪಿಗಳು, ನಂತರ ಶವಗಳನ್ನು ಗ್ರಾಮದ ಹೊರವಲಯದಲ್ಲಿ ದೇವಸ್ಥಾನದ ಹಿಂಭಾಗ ಹಾಗೂ ಗಾಗನ್ ನದಿ ದಡದಲ್ಲಿ ಹೂತು ಮರೆಮಾಚಿದ್ದರು ಎನ್ನಲಾಗಿದೆ.



ಮೃತ ಕಾಜಲ್ ಸೈನಿ ಖಾಸಗಿ ಶಾಲೆಯೊಂದರಲ್ಲಿ ಶಿಕ್ಷಕಿಯಾಗಿ ಕೆಲಸ ಮಾಡುತ್ತಿದ್ದ ಯುವತಿಯಾಗಿದ್ದು, ಮೊಹಮ್ಮದ್ ಅರ್ಮಾನ್ ಸೌದಿ ಅರೇಬಿಯಾದಲ್ಲಿ ಉದ್ಯೋಗ ಮಾಡಿಕೊಂಡು ಕೆಲ ತಿಂಗಳುಗಳ ಹಿಂದೆ ಊರಿಗೆ ಮರಳಿದ್ದರು. ಕೆಲಸ ಮತ್ತು ಬದುಕಿನ ನಡುವೆ ಇಬ್ಬರ ಪರಿಚಯ ಸ್ನೇಹವಾಗಿ ಬೆಳೆಯುತ್ತಾ, ನಂತರ ಪ್ರೀತಿಯಾಗಿ ಪರಿವರ್ತನೆಯಾಗಿತ್ತು. ಆದರೆ ಈ ಅಂತರ್ಧರ್ಮೀಯ ಸಂಬಂಧವನ್ನು ಕಾಜಲ್‌ರ ಕುಟುಂಬ ತೀವ್ರವಾಗಿ ವಿರೋಧಿಸಿತ್ತು. ಸಹೋದರರು ಹಲವು ಬಾರಿ ಕಾಜಲ್‌ರನ್ನು ಅರ್ಮಾನ್‌ನಿಂದ ದೂರವಿಡಲು ಯತ್ನಿಸಿದ್ದರು. ಆದರೂ ಇಬ್ಬರೂ ತಮ್ಮ ಪ್ರೀತಿಯನ್ನು ಮುಂದುವರಿಸಿದ್ದರು ಎನ್ನಲಾಗಿದೆ.



ಸುಮಾರು ಮೂರು ದಿನಗಳ ಹಿಂದೆ ಕಾಜಲ್ ಹಾಗೂ ಅರ್ಮಾನ್ ಇಬ್ಬರೂ ಏಕಾಏಕಿ ಕಾಣೆಯಾಗಿದ್ದರು. ಅರ್ಮಾನ್‌ರ ತಂದೆ ಹನೀಫ್ ಅವರು ಸ್ಥಳೀಯ ಪೊಲೀಸ್ ಠಾಣೆಗೆ ನಾಪತ್ತೆ ದೂರು ದಾಖಲಿಸಿದ್ದರು. ಈ ದೂರಿನ ಆಧಾರದ ಮೇಲೆ ಪೊಲೀಸರು ತನಿಖೆ ಆರಂಭಿಸಿದಾಗ, ಕಾಜಲ್ ಕೂಡ ಕಾಣೆಯಾಗಿರುವುದು ಬೆಳಕಿಗೆ ಬಂದಿದೆ. ತನಿಖೆಯ ಭಾಗವಾಗಿ ಪೊಲೀಸರು ಕಾಜಲ್‌ರ ಸಹೋದರರನ್ನು ವಿಚಾರಣೆಗೆ ಒಳಪಡಿಸಿದ ವೇಳೆ, ಅವರು ಪ್ರೀತಿಯನ್ನು ವಿರೋಧಿಸಿ ಇಬ್ಬರನ್ನೂ ಹತ್ಯೆ ಮಾಡಿರುವುದಾಗಿ ಒಪ್ಪಿಕೊಂಡಿದ್ದಾರೆ.

ಆರೋಪಿಗಳ ಹೇಳಿಕೆ ಆಧರಿಸಿ ಪೊಲೀಸರು ಶವಗಳನ್ನು ಹೂತಿಟ್ಟಿದ್ದ ಸ್ಥಳಗಳಿಗೆ ತೆರಳಿ, ಬುಧವಾರ ಸಂಜೆ ಕಾಜಲ್ ಮತ್ತು ಅರ್ಮಾನ್ ಅವರ ಮೃತದೇಹಗಳನ್ನು ಹೊರತೆಗೆಯಲಾಗಿದೆ. ಶವಗಳನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದ್ದು, ಕೊಲೆಗೆ ಬಳಸಿದ್ದ ಗುದ್ದಲಿಯನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಆರೋಪಿಗಳು ಇಬ್ಬರನ್ನೂ ಕಟ್ಟಿ ಹಾಕಿ, ನಿರ್ದಯವಾಗಿ ಗುದ್ದಲಿಯಿಂದ ಕೊಚ್ಚಿ ಕೊಂದಿರುವುದಾಗಿ ವಿವರಿಸಿದ್ದಾರೆ.

ಈ ಪ್ರಕರಣವನ್ನು ಕುಮಾರ್ ರಣವಿಜಯ್, ಪೊಲೀಸ್ ಸೂಪರಿಂಟೆಂಡೆಂಟ್ ಹಾಗೂ ಹಿರಿಯ ಅಧಿಕಾರಿ ಸತ್ಪಾಲ್ ಆಂಟಿಲ್ ಅವರು ಅಧಿಕೃತವಾಗಿ ದೃಢೀಕರಿಸಿದ್ದಾರೆ. ಕಾಜಲ್‌ರ ಮೂವರು ಸಹೋದರರ ವಿರುದ್ಧ ಕೊಲೆ ಪ್ರಕರಣ ದಾಖಲಿಸಲಾಗಿದ್ದು, ಇಬ್ಬರನ್ನು ಬಂಧಿಸಲಾಗಿದೆ. ಮತ್ತೊಬ್ಬ ಆರೋಪಿಗಾಗಿ ಶೋಧ ಕಾರ್ಯ ಮುಂದುವರಿದಿದೆ. ಅರ್ಮಾನ್‌ರ ಸಹೋದರಿ, ತಮ್ಮ ಸಹೋದರನ ಪ್ರೀತಿಯ ಸಂಬಂಧದ ಬಗ್ಗೆ ತಮಗೆ ಯಾವುದೇ ಮಾಹಿತಿ ಇರಲಿಲ್ಲ ಎಂದು ಹೇಳಿದ್ದಾರೆ.

ಈ ಅಮಾನುಷ ಘಟನೆ, ಅಂತರ್ಧರ್ಮೀಯ ಸಂಬಂಧಗಳ ವಿರುದ್ಧ ಸಮಾಜದಲ್ಲಿ ಇನ್ನೂ ಜೀವಂತವಾಗಿರುವ ಕಟ್ಟುನಿಟ್ಟಿನ ಮನೋಭಾವ ಮತ್ತು ಮರ್ಯಾದಾ ಹತ್ಯೆಗಳ ಭೀಕರ ವಾಸ್ತವವನ್ನು ಮತ್ತೊಮ್ಮೆ ಬೆಳಕಿಗೆ ತಂದಿದೆ. ಪ್ರೀತಿ ಮತ್ತು ವೈಯಕ್ತಿಕ ಆಯ್ಕೆಗೆ ಗೌರವ ನೀಡಬೇಕಾದ ಸಮಾಜದಲ್ಲಿ, ಕುಟುಂಬದ ಹೆಸರಿನ ಹೆಸರಿನಲ್ಲಿ ಜೀವ ಹರಣ ನಡೆಯುತ್ತಿರುವುದು ಗಂಭೀರ ಚಿಂತನೆಗೆ ಕಾರಣವಾಗಿದೆ. ಪೊಲೀಸರು ಪ್ರಕರಣದ ಎಲ್ಲ ಆಯಾಮಗಳಲ್ಲಿ ತನಿಖೆ ಮುಂದುವರಿಸಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ವಿವರಗಳು ಬಹಿರಂಗವಾಗುವ ಸಾಧ್ಯತೆ ಇದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# MGNREGA ಕಾಯ್ದೆಯನ್ನು ಮರುಸ್ಥಾಪಿಸುವವರೆಗೆ ನಮ್ಮ ಹೋರಾಟ- ಸಿಎಂ

**ಬೆಂಗಳೂರು:** ಮೊದಲ ವರ್ಷದ ಜಂಟಿ ಅಧಿವೇಶನದಲ್ಲಿ ಮಾನ್ಯ ರಾಜ್ಯಪಾಲರು ಸಚಿವ ಸಂಪುಟ ಸಿದ್ಧಪಡಿಸಿದ ಭಾಷಣವನ್ನು ಓದದೇ, ಸಂವಿಧಾನದ ವಿಧಿಗಳನ್ನು ಉಲ್ಲಂಘನೆ ಮಾಡಿದ್ದಾರೆ. ಅವರ ಈ ನಡೆ ಜನಪ್ರತಿನಿಧಿಗಳ ಸಭೆಗೆ ಮಾಡಿದ ಅವಮಾನ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಇಂದು ವಿಧಾನಸೌಧದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದರು.

**MGNREGA ವನ್ನು ವಿಬಿಜಿರಾಮ್ ಜಿ ಬದಲಾವಣೆ- ಸರ್ಕಾರದ ತೀವ್ರ ವಿರೋಧ**: ಪ್ರತಿ ವರ್ಷದ ಆರಂಭದಲ್ಲಿ ನಡೆಯುವ ಹಾಗೂ ಹೊಸ ಸರ್ಕಾರ ಸ್ಥಾಪನೆಗೊಂಡ ಸಂದರ್ಭದಲ್ಲಿ ನಡೆಸಲಾಗುವ ಜಂಟಿ ಅಧಿವೇಶನದಲ್ಲಿ ಭಾಷಣ ಮಾಡುವುದು ಸಂವಿಧಾನದ ರೀತ್ಯ ಸನ್ಮಾನ್ಯ ರಾಜ್ಯಪಾಲರ ಕರ್ತವ್ಯವಾಗಿರುತ್ತದೆ. ಸಂವಿಧಾನ ಕಲಂ176 ಮತ್ತು 163 ರಂತೆ ಸರ್ಕಾರದ ಸಚಿವ ಸಂಪುಟ ಸಿದ್ಧಪಡಿಸಿರುವ ಭಾಷಣವನ್ನು ಓದಲೇಬೇಕೆಂಬ ನಿಯಮವಿದ್ದು, ರಾಜ್ಯಪಾಲರು ಸಿದ್ಧಪಡಿಸಿದ ಭಾಷಣವನ್ನು ಓದುವಂತಿಲ್ಲ. ಇಂದು ವರ್ಷದ ಮೊದಲ ಜಂಟಿ ಅಧಿವೇಶನ ಮತ್ತು ವಿಶೇಷ ಅಧಿವೇಶನವನ್ನು ಕರೆಯಲಾಗಿತ್ತು. MGNREGA (ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯ್ದೆ) ರದ್ದುಪಡಿಸಿ, ವಿಬಿಜಿರಾಮ್ ಜಿ ( ವಿಕಸಿತ ಭಾರತ - ರೋಜ್‌ಗಾರ್ ಮತ್ತು ಅಜೀವಿಕಾ ಮಿಷನ್ (ಗ್ರಾಮೀಣ) ಎಂಬ ಕಾಯ್ದೆಯನ್ನು ಕೇಂದ್ರ ಸರ್ಕಾರ ಹೊಸದಾಗಿ ರಚಿಸಿದೆ. ಇದಕ್ಕೆ ನಮ್ಮ ಸರ್ಕಾರದ ತೀವ್ರ ವಿರೋಧವಿದೆ ಎಂದರು.



**ರಾಜ್ಯಪಾಲರ ನಡೆ ಜನಪ್ರತಿನಿಧಿಗಳ ಸಭೆಗೆ ಮಾಡಿದ ಅವಮಾನ- ಮುಖ್ಯಮಂತ್ರಿ ಸಿದ್ದರಾಮಯ್ಯ**

**ಕೆಲಸದ ಹಕ್ಕು ಖಾತ್ರಿಪಡಿಸುವ MGNREGA"**:ಮೊದಲನೆಯದಾಗಿ ಕಾಯ್ದೆಯಿಂದ ಮಹಾತ್ಮಾ ಗಾಂಧಿ ಅವರ ಹೆಸರನ್ನು ತೆಗೆಯಲಾಗಿದೆ. 2005 ರಲ್ಲಿ ಮನಮೋಹನ್ ಸಿಂಗ್ ಪ್ರಧಾನಿಯಾಗಿದ್ದಾಗ, ಸಂವಿಧಾನ ನಿರ್ದೇಶನಗಳಂತೆ, ಆಹಾರ ಭದ್ರತೆ, ಮಾಹಿತಿ ಹಕ್ಕು , ಶಿಕ್ಷಣ ಹಕ್ಕು , ಉದ್ಯೋಗದ ಹಕ್ಕು ಕಾಯ್ದೆಗಳನ್ನು ಜಾರಿಗೆ ತಂದಿದ್ದರು. ಬಡ ಕಾರ್ಮಿಕರಿಗೆ ಕನಿಷ್ಠ 100 ದಿನಗಳ ಕಾಲ ಉದ್ಯೋಗ ಒದಗಿಸುವ ಉದ್ದೇಶದಿಂದ ಜಾರಿಗೆ ತರಲಾಗಿದ್ದ ಈ ಕಾಯ್ದೆಯಿಂದ ದಲಿತರು, ಕಾರ್ಮಿಕರು ಮತ್ತು ಮಹಿಳೆಯರು ಮತ್ತು ಸಣ್ಣ ರೈತರಿಗೆ ಅನುಕೂಲವಾಗುತ್ತದೆ ಎಂದರು.

**ವಿಬಿ ಜಿ ರಾಮ್ ಜಿ : ವರ್ಷ ಪೂರ್ತಿ ಕೆಲಸದ ಭರವಸೆ ಇಲ್ಲ**:ಹೊಸ ಕಾಯ್ದೆಯಲ್ಲಿ ವಿಶೇಷವಾಗಿ ಶೇ.53 ಮಹಿಳೆಯರು, ಶೇ.28 ದಲಿತರಿದ್ದು, ಇವರಿಗೆ ಉದ್ಯೋಗದ ಖಾತ್ರಿ ಇಲ್ಲ. ಅವರು ಅಪೇಕ್ಷಿಸಿದ ಸ್ಥಳದಲ್ಲಿ, ಸಣ್ಣ ರೈತರು ಅವರ ಜಮೀನುಗಳಲ್ಲಿಯೇ ಕೆಲಸ ಮಾಡುವ ಅವಕಾಶವನ್ನು ಮುಂಚಿನ ಕಾಯ್ದೆ ಕಲ್ಪಿಸಿತ್ತು. ಆದರೆ ವಿಬಿ ಜಿ ರಾಮ್ ಜಿ ಕಾಯ್ದೆಯಲ್ಲಿ ಈ ನಿರ್ಣಯವನ್ನು ಕೇಂದ್ರ ಸರ್ಕಾರ ಕೈಗೊಳ್ಳುತ್ತದೆ. ಕೇಂದ್ರ ಸರ್ಕಾರ ನಿರ್ಧರಿಸುವ ಕಡೆಗಳಲ್ಲಿ ಬಡ ಕಾರ್ಮಿಕರು ಕೆಲಸ ಮಾಡಬೇಕಾಗಿದೆ. ಹಿಂದಿನ ಕಾಯ್ದೆಯಲ್ಲಿ ವರ್ಷದ 365 ದಿನಗಲ್ಲಿ ಯಾವಾಗಾಲಾದರೂ ಕೆಲಸ ಕೊಡಬಹುದಾಗಿದ್ದು, ಅದು ಸರ್ಕಾರದ ಕರ್ತವ್ಯವಾಗಿತ್ತು. ಅಲ್ಲದೇ, ಈ ಬಗ್ಗೆ ಕ್ರಿಯಾಯೋಜನೆ ರಚಿಸುವ ಹಕ್ಕು ಆಯಾ ಗ್ರಾಮಸಭೇ ಮತ್ತು ಪಂಚಾಯ್ತಿಗಳಿಗೆ ಅವಕಾಶವಿತ್ತು. ಆದರೆ ಈ ಹೊಸ ಕಾಯ್ದೆಯಲ್ಲಿ ಈ ಅವಕಾಶವನ್ನು ರದ್ದು ಪಡಿಸಲಾಗಿದೆ ಎಂದು ವಿವರಿಸಿದರು.

**ಹೊಸ ಕಾಯ್ದೆಗೆ ವಿರೋಧಪಕ್ಷದವರಿಂದ ಉದ್ದೇಶಪೂರ್ವಕ ಸಮರ್ಥನೆ**: ಹೊಸ ಕಾಯ್ದೆಯನ್ನು ಉದ್ದೇಶ ಪೂರ್ವಕವಾಗಿ ಸಮರ್ಥಿಸಿ ಕೊಳ್ಳುತ್ತಿದ್ದಾರೆ. ಅವರಿಗೆ ಸ್ವಾತಂತ್ರ್ಯವಿಲ್ಲ ಹಾಗೂ ಕೇಂದ್ರದ ಕಾಯ್ದೆಯಗಳನ್ನು ಸಹಕರಿಸಲೇಬೇಕೆಂಬ ನೀತಿಯಂತೆ ನಡೆದುಕೊಳ್ಳುತ್ತಿದ್ದಾರೆ. ಆದರೆ ಆಡಳಿತ ಪಕ್ಷವಾಗಿ ನಮಗೆ ಅದರ ಬಗ್ಗೆ ವಿರೋಧವಿದ್ದು, ಈ ವಿಚಾರಗಳನ್ನು ರಾಜ್ಯಪಾಲರ ಭಾಷಣದಲ್ಲಿ ಸೇರಿಸಲಾಗಿತ್ತು ಎಂದರು.

**ಹೊಸ ಕಾಯ್ದೆ ರದ್ದುಗೊಳ್ಳಲೇಬೇಕು**:MGNREGA ಕಾಯ್ದೆಯನ್ನು ಮರುಸ್ಥಾಪಿಸುವುದು ಮತ್ತು ಹೊಸ ಕಾಯ್ದೆಯನ್ನು ರದ್ದುಗೊಳಿಸಬೇಕೆಂಬುದೇ ನಮ್ಮ ಉದ್ದೇಶ. ನಮ್ಮ ಪಕ್ಷ ಮತ್ತು ಸರ್ಕಾರದಲ್ಲಿ ಈ ಬಗ್ಗೆ ನಿರ್ಣಯ ಕೈಗೊಳ್ಳಲಾಗಿದೆ. MGNREGA ಮರುಸ್ಥಾಪನೆ ಮಾಡುವವರೆಗೆ ನಿರಂತರವಾಗಿ ನಮ್ಮ ಹೋರಾಟ ನಡೆಯಲಿದೆ. ಈ ಹಿಂದೆ ರೈತರ ವಿರೋಧಿ ಕಾಯ್ದೆಯನ್ನು ಕೇಂದ್ರ ಸರ್ಕಾರ ವಾಪಸ್ಸು ತೆಗೆದುಕೊಂಡಂತೆ, ಈ ಹೊಸ ಕಾಯ್ದೆಯನ್ನು ವಾಪಸ್ಸು ತೆಗೆದುಕೊಳ್ಳುವವರೆಗೆ ನಮ್ಮ ಹೋರಾಟ ನಡೆಯಲಿದೆ ಎಂದರು.

**ರಾಜ್ಯಪಾಲರ ನಡೆ ಸಂವಿಧಾನದ ಉಲ್ಲಂಘನೆ**:ರಾಜ್ಯಪಾಲರು ಸಚಿವ ಸಂಪುಟ ಸಿದ್ಧಪಡಿಸಿದ ಭಾಷಣವನ್ನು ಓದದೆ, ತಾವೇ ಸಿದ್ಧಪಡಿಸಿದ ಭಾಷಣವನ್ನು ಓದುವ ಮೂಲಕ ಸಂವಿಧಾನದ ವಿಧಿಗಳನ್ನು ಉಲ್ಲಂಘನೆ ಮಾಡಿದ್ದಾರೆ. ಸಂವಿಧಾನದ ಕಲಂ 176 ಮತ್ತು 163 ರಂತೆ ಸಚಿವ ಸಂಪುಟ ಭಾಷಣವನ್ನು ಓದಲೇಬೇಕಾಗಿದ್ದು ವಾಸ್ತವ ಅಂಶ. ಇದು ಸಂವಿಧಾನ ಸ್ಥಾಪನೆಯಾದಾಗಿನಿಂದ ನಡೆದುಕೊಂಡಿರುವ ಪದ್ಧತಿ, ರಾಜ್ಯಪಾಲರ ಈ ನಡೆ, ಜನಪ್ರತಿನಿಧಿಗಳ ಸಭೆಗೆ ಮಾಡಿದ ಅವಮಾನ. ಸಂವಿಧಾನಬದ್ಧವಾದ ವಿಚಾರದ ಉಲ್ಲಂಘನೆಯಾಗಿದೆ ಎಂದರು.

**ಕೇಂದ್ರದ ತನ್ನ ತಪ್ಪು ಮರೆಮಾಚಲು ರಾಜ್ಯಪಾಲರಿಂದ ಭಾಷಣ**:ಇದನ್ನು ನಮ್ಮ ಪಕ್ಷ ಮತ್ತು ಸರ್ಕಾರ , ಶಾಸಕರು, ಎಂಎಲ್ ಸಿ ಪ್ರತಿಭಟನೆ ಮಾಡುತ್ತದೆ. ಇಡೀ ರಾಜ್ಯದಲ್ಲಿ ಹೋರಾಟ ಹಮ್ಮಿಕೊಳ್ಳಲಾಗಿದೆ. ರಾಜ್ಯಪಾಲು ಕೇಂದ್ರ ಸರ್ಕಾರದ ಕೈಗೊಂಬೆಯಂತೆ ವರ್ತಿಸಿದ್ದಾರೆ. ಕೇಂದ್ರ ಸರ್ಕಾರ ತಾವು ಮಾಡಿದ ತಪ್ಪನ್ನು ಮರೆಮಾಚಲು ರಾಜ್ಯಪಾಲರ ಕೈಯಲ್ಲಿ ಬೇರೆ ಭಾಷಣವನ್ನು ಓದಿಸಿದ್ದಾರೆ. ಇದು ಸಂವಿಧಾನ ಬಾಹಿರ ಕೃತ್ಯ. ರಾಜ್ಯಪಾಲರು ತಮ್ಮ ಕರ್ತವ್ಯವನ್ನು ಪಾಲನೆ ಮಾಡಿಲ್ಲ ಎಂದರು.

**ಚರ್ಚೆಯ ನಂತರ ಮುಂದಿನ ನಿರ್ಣಯ**:ಸರ್ಕಾರ ಸಿದ್ಧಪಡಿಸಿರುವ ಭಾಷಣದ ಪ್ರತಿಯನ್ನು ಎಲ್ಲ ಶಾಸಕರು ಎಂಎಲ್ ಸಿಗಳಿಗೆ ವಿತರಿಸಲಾಗಿದೆ. ಈ ವಿಚಾರದ ಬಗ್ಗೆ ಸುಪ್ರೀಂ ಕೋರ್ಟ್ ಮೊಕ್ಕದ್ದಮೆ ಹೂಡುವ ಬಗ್ಗೆ ಚರ್ಚಿಸಿ ನಿರ್ಣಯ ಕೈಗೊಳ್ಳಲಾಗುವುದು. ಇದರ ಬಗ್ಗೆ ಚರ್ಚಿಸಿ ಕಾನೂನು ರೀತ್ಯ ಕ್ರಮ ಕೈಗೊಳ್ಳಲಾಗುವುದು ಎಂದರು.

# ವಿದ್ಯಾರ್ಥಿಗಳ ಬೆಳವಣಿಗೆಗೆ ಅನುಭವಾತ್ಮಕ ಕಲಿಕೆ ಪೂರಕ : ಪುಷ್ಪಲತಾ



**ಯಶವಂತಪುರ:** ಅನುಭವಾತ್ಮಕ, ಆನಂದ ದಾಯಕ ಹಾಗೂ ಭಾಗವಹಿಸುವಿಕೆಗೆ ಆಧಾರಿತ ಕಲಿಕೆ ವಿದ್ಯಾರ್ಥಿಗಳ ಸರ್ವಾಂಗೀಣ ವ್ಯಕ್ತಿತ್ವ ವಿಕಸನಕ್ಕೆ ಅತ್ಯಂತ ಅಗತ್ಯವಾಗಿದ್ದು, ಇಂತಹ ಕಲಿಕಾ ವಿಧಾನಗಳು ಮಕ್ಕಳಲ್ಲಿ ಆತ್ಮವಿಶ್ವಾಸ, ಸೃಜನಶೀಲತೆ ಮತ್ತು ಕಲಿಕೆಯ ಮೇಲಿನ ಆಸಕ್ತಿಯನ್ನು ಹೆಚ್ಚಿಸುತ್ತವೆ ಎಂದು ಸಮೂಹ ಸಂಪನ್ಮೂಲ ವ್ಯಕ್ತಿ ಪುಷ್ಪಲತಾ ಕೆ.ಬಿ ಅವರು ಅಭಿಪ್ರಾಯಪಟ್ಟರು.

ಕ್ಷೇತ್ರದ ಚನ್ನೇನಹಳ್ಳಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಿಕ್ಷಣ ಇಲಾಖೆ ಹಾಗೂ ಗ್ರಾಮ ಪಂಚಾಯತಿಯ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಸುಂಕದಕಟ್ಟೆ ಜನತಾ ಕಾಲನಿ ಕ್ಲಸ್ಟರ್ ಹಂತದ ಮಕ್ಕಳ ಬುನಾದಿ ಸಾಕ್ಷರತೆ ಮತ್ತು ಸಂಖ್ಯಾಶಾಸ್ತ್ರದ ಕಲಿಕಾ ಹಬ್ಬ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಕಲಿಕಾ ಹಬ್ಬಗಳು ಪಾಠಪುಸ್ತಕಕ್ಕೆ ಸೀಮಿತವಾಗದೇ ಮಕ್ಕಳಲ್ಲಿರುವ ಸುಪ್ತ ಪ್ರತಿಭೆಗಳನ್ನು ಹೊರತರುವ ಮಹತ್ವದ ವೇದಿಕೆಗಳಾಗಿವೆ ಎಂದರು. ವಿದ್ಯಾರ್ಥಿಗಳಲ್ಲಿ ಸೃಜನಶೀಲ ಕಲಿಕೆಯ ಆಸಕ್ತಿಯನ್ನು ಬೆಳೆಸಿ, ಓದು, ಬರವಣಿಗೆ ಹಾಗೂ ಸಂಖ್ಯಾಜ್ಞಾನದ ಕೌಶಲಗಳನ್ನು ಗಟ್ಟಿಗೊಳಿಸಲು ಇಂತಹ ಕಾರ್ಯಕ್ರಮಗಳು ಪರಿಣಾಮಕಾರಿಯಾಗಿವೆ ಎಂದು ಹೇಳಿದರು.

ವಿದ್ಯಾರ್ಥಿಗಳ ಕಲಿಕೆಯನ್ನು ಸಂಭ್ರಮದ ಮೂಲಕ ಅನುಭವಿಸುವಂತೆ ಮಾಡುವ ಕಲಿಕಾ ಹಬ್ಬ, ಶಿಕ್ಷಣ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ಜೊತೆಗೆ ಶಾಲೆ-ಪಾಲಕರು-ಸಮಾಜದ ನಡುವಿನ ಸಂಪರ್ಕವನ್ನು ಗಟ್ಟಿಗೊಳಿಸುತ್ತದೆ. ಒಟ್ಟಾರೆ, ಕಲಿಕಾ ಹಬ್ಬವು ಶಿಕ್ಷಣವನ್ನು ಸುಧಾರಿಸುವ ಹಾಗೂ ಮಕ್ಕಳಲ್ಲಿ ಕಲಿಕೆಯ ಸಂತೋಷ ಮೂಡಿಸುವ ಅತ್ಯುತ್ತಮ ವೇದಿಕೆಯಾಗಿದೆ ಎಂದು ಪುಷ್ಪಲತಾ ಕೆ.ಬಿ ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಚನ್ನೇನಹಳ್ಳಿ ಗ್ರಾಮ ಪಂಚಾಯಿತಿ ಸದಸ್ಯ ಕಾಳಯ್ಯ ಅವರು, ಸರ್ಕಾರಿ ಶಾಲೆಗಳ ಸಬಲೀಕರಣ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಸಾಧನೆಗೆ ಸಹಕಾರಿಯಾಗುವ ಕಲಿಕಾ ಹಬ್ಬ ಸೇರಿದಂತೆ ವಿವಿಧ ಶಿಕ್ಷಣ ಸಂಬಂಧಿತ ಚಟುವಟಿಕೆಗಳಿಗೆ ಗ್ರಾಮ ಪಂಚಾಯಿತಿ ಸದಾ ಬೆಂಬಲ ನೀಡುತ್ತಿದೆ ಎಂದರು. ಮಕ್ಕಳ ಶೈಕ್ಷಣಿಕ ಪ್ರಗತಿಗೆ ಅಗತ್ಯವಾದ ಮೂಲಸೌಕರ್ಯ, ಸೌಲಭ್ಯಗಳು ಹಾಗೂ ಕಾರ್ಯಕ್ರಮಗಳಿಗೆ ಮುಂದೆಯೂ ಪಂಚಾಯಿತಿ ವತಿಯಿಂದ ಅಗತ್ಯ ಸಹಾಯ ಮತ್ತು ಸಹಕಾರ ನಿರಂತರವಾಗಿ ನೀಡಲಾಗುವುದು ಎಂದು ಭರವಸೆ ನೀಡಿದರು.

ಕಲಿಕಾ ಹಬ್ಬದ ಅಂಗವಾಗಿ ಕಥೆ ಹೇಳುವಿಕೆ, ಗಟ್ಟಿ ವಾಚನ, ಪಾಲಕರ ಸಹಭಾಗಿತ್ವ, ಪೌಷ್ಟಿಕತೆ ಅರಿವು, ಸಂತೋಷದಾಯಕ ಕಲಿಕೆ, ಚದ್ಮವೇಷ ಪ್ರದರ್ಶನ, ಪರಿಸರ ರಕ್ಷಣೆ ಹಾಗೂ ಸಮತೋಲನ ಕಲಿಕೆಯಂತಹ ಹಲವು ವೈವಿಧ್ಯಮಯ ಚಟುವಟಿಕೆಗಳನ್ನು ಯಶಸ್ವಿಯಾಗಿ ನಡೆಸಲಾಯಿತು. ಈ ಚಟುವಟಿಕೆಗಳು ಮಕ್ಕಳಲ್ಲಿ ಕಲಿಕೆಯ ಆಸಕ್ತಿ ಹೆಚ್ಚಿಸುವ ಜೊತೆಗೆ ಸಾಮಾಜಿಕ ಹಾಗೂ ನೈತಿಕ ಮೌಲ್ಯಗಳನ್ನು ಬೆಳೆಸುವಲ್ಲಿ ಸಹಕಾರಿಯಾಗಿವೆ.

ಈ ಕಲಿಕಾ ಹಬ್ಬದಲ್ಲಿ ಸುಮಾರು 7 ಶಾಲೆಗಳಿಂದ 110ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಪಾಲಕರು ಮತ್ತು ಶಿಕ್ಷಕರು ಸಕ್ರಿಯವಾಗಿ ಪಾಲ್ಗೊಂಡು ಮಕ್ಕಳನ್ನು ಪ್ರೋತ್ಸಾಹಿಸಿದರು. ವಿವಿಧ ಚಟುವಟಿಕೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನಗಳನ್ನು ವಿತರಿಸಿ, ಅವರ ಸಾಧನೆಗೆ ಗೌರವ ಸಲ್ಲಿಸಲಾಯಿತು.

ಕಾರ್ಯಕ್ರಮದಲ್ಲಿ ಚನ್ನೇನಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ರಾಜೇಶ್ವರಿ, ಪಿಡಿಒ ನಾರಾಯಣಸ್ವಾಮಿ, ಶಿಕ್ಷಣ ಸಂಯೋಜಕ ಶಾಮೇಗೌಡ, ಶಿಕ್ಷಕ ಶ್ರೀನಿವಾಸ್ ಸೇರಿದಂತೆ ಸಮೂಹ ಸಂಪನ್ಮೂಲ ವ್ಯಕ್ತಿಗಳಾದ ಕಾಂತರಾಜು, ಚಂದ್ರಶೇಖರ್, ರಾಜಣ್ಣ, ರಾಜೇಶ್ವರಿ, ವಿವಿಧ ಶಾಲೆಗಳ ಶಿಕ್ಷಕರು, ಪಾಲಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದು, ಕಾರ್ಯಕ್ರಮಕ್ಕೆ ವಿಶೇಷ ಕಳೆ ನೀಡಿದರು.

# ಬದುಕಿರುವಾಗಲೇ ನರಕ ನೋಡಿ ಪ್ರಾಣಬಿಟ್ಟ ಮಹಿಳೆ



**ಬೆಳಗಾವಿ:** ಪತ್ನಿ ಶೀಲದ ಮೇಲೆ ಶಂಕಿಸಿ ಆಕೆಯ ಮೇಲೆ ಮನಸೋ ಇಚ್ಚೆ ಹಲ್ಲೆ ಮಾಡಿ ಪತ್ತಿಯೇ ಆಕೆಯನ್ನು ಕೊಲೆ ಮಾಡಿರುವ ಘಟನೆ ಬೆಳಗಾವಿ ಜಿಲ್ಲೆಯ ಖಾನಾಪುರ ತಾಲೂಕಿನ ಕಾಪೋಲಿ ಗ್ರಾಮದಲ್ಲಿ ನಡೆದಿದೆ. ಕಿರಣಾ ಮೃತ ಮಹಿಳೆಯಾಗಿದ್ದು, ಆರೋಪಿ ಅವಿನಾಶ್‌ನನ್ನು ಪೊಲೀಸರು ಬಂಧಿಸಿದ್ದಾರೆ. ಪತಿಯನ್ನು ಮರ್ಡರ್ ಮಾಡಿ ಬಳಿಕ ಏನೂ ಗೊತ್ತಿಲ್ಲದಂತೆ ಡ್ರಾಮಾ ಮಾಡಿದ್ದ ಅವಿನಾಶ್, ಹೃದಯಾಘಾತದಿಂದ ಕಿರಣಾ ಮೃತಪಟ್ಟಿರೋದಾಗಿ ಎಲ್ಲರನ್ನ ನಂಬಿಸಿದ್ದ. ಆದ್ರೆ ಮೃತದೇಹದ ಸ್ನಾನ ಮಾಡಿಸುವ ವೇಳೆ ಅಸಲೀ ಸತ್ಯ ರಿವೀಲ್ ಆಗಿದೆ.

ಅವಿನಾಶ್ ಮತ್ತು ಕಿರಣಾ ದಂಪತಿ ಗ್ರಾಮದಲ್ಲಿ ಅಂಗಡಿ ಹೊಂದಿದ್ದು, ಅದುವೇ ಜೀವನಕ್ಕೆ ಪ್ರಮುಖ ಆಧಾರವಾಗಿತ್ತು. ಕಳೆದ 12 ವರ್ಷಗಳ ಹಿಂದೆ ಮದುವೆಯಾಗಿದ್ದ ದಂಪತಿ ಅನ್ಯೋನ್ಯವಾಗಿದ್ದು, ಇಬ್ಬರು ಮುದ್ದಾದ ಮಕ್ಕಳು ಕೂಡ ಇದಕ್ಕೆ ಸಾಕ್ಷಿಯಾಗಿದ್ದರು. ಆದರೆ, ಕೆಲ ತಿಂಗಳುಗಳಿಂದ ಅವಿನಾಶ್ ಮನಸ್ಸಿನಲ್ಲಿ ಪತ್ನಿಯ ಬಗ್ಗೆ ಸಂಶಯ ಮೂಡಿದೆ. ಇದೇ ವಿಚಾರಕ್ಕೆ ಮನೆಯಲ್ಲಿ ನಿತ್ಯ ಜಗಳ ಆಗುತ್ತಿತ್ತು. ಅಂಗಡಿ ಅಂದಮೇಲೆ ಜನ ಬರೋದು ಹೋಗೋದು ಸಾಮಾನ್ಯ. ಆದರೆ ಇದನ್ನೇ ದೊಡ್ಡದು ಮಾಡಿ ಅವಿನಾಶ್ ಜಗಳವಾಡುತ್ತಿದ್ದ. ಎರಡು ದಿನ ಹಿಂದೆ ಇದೇ ವಿಚಾರಕ್ಕೆ ಪತ್ನಿಯ ಮೇಲೆ ಹಲ್ಲೆ ಕೂಡ ಮಾಡಿದ್ದ. ಈ ವೇಳೆ ಅಲ್ಲಿಗೆ ಬಂದ ಕುಟುಂಬದ ಹಿರಿಯರು ದಂಪತಿ ಸಮಾಧಾನ ಮಾಡಿ ಹೋಗಿದ್ರು. ಹಿರಿಯರು ಹೋದ ಬಳಿಕ ಮೊನ್ನೆ ಮಧ್ಯರಾತ್ರಿ, ಕಿರಣಾಳ ಮೇಲೆ ಪತಿ ತೀವ್ರವಾಗಿ ಹಲ್ಲೆ ಮಾಡಿದ್ದು, ಈ ವೇಳೆ ಆಕೆ ಪ್ರಾಣ ಬಿಟ್ಟಿದ್ದಾಳೆ.



ಆಕೆ ಸಾಯುತ್ತಿದ್ದಂತೆ ಮೃತ ದೇಹವನ್ನುತೆ ಆಸ್ಪತ್ರೆಗೆ ತೆಗೆದುಕೊಂಡು ಬಂದಿದ್ದ ಅವಿನಾಶ್ ಬಳಿಕ ಮತ್ತೆ ಊರಿಗೆ ಶವ ತಂದು ಪತ್ನಿ ಹೃದಯಾಘಾತದಿಂದ ಸತ್ತಿದ್ದಾಳೆ ಎಂದು ಬಿಂಬಿಸಿದ್ದಾನೆ. ಈ ವೇಳೆ ಮಹಿಳೆಯರು ಶವಕ್ಕೆ ಸ್ನಾನ ಮಾಡಿಸಬೇಕು ಅಂತಾ ಬಟ್ಟೆ ತೆಗೆದಾಗ ಪಾಪಿ ಗಂಡನ ಕ್ರೌರ್ಯ ಬಯಲಾಗಿದೆ. ಕಿರಣಾ ಮೈ ತುಂಬ ಬಾಸುಂಡೆ ಬಂದಿದ್ದು, ಕಪ್ಪು ಕಲೆ ಕಂಡು ಮಹಿಳೆಯರು ಶಾಕ್ ಆಗಿದ್ದಾರೆ. ಬಳಿಕ ಗಂಡನೇ ಹೊಡೆದು ಪತ್ನಿಯನ್ನು ಕೊಂದಿದ್ದಾನೆ ಎಂದು ನಂದಗಡ ಠಾಣೆ ಪೊಲೀಸರಿಗೆ ವಿಚಾರ ತಿಳಿಸಿದ್ದಾರೆ. ಸ್ಥಳೀಯರ ಮಾಹಿತಿ ಮೇರೆಗೆ ಪೊಲೀಸರು ಪತಿಯನ್ನು ವಶಕ್ಕೆ ಪಡೆದಿದ್ದಾರೆ.

**ಈತ ಪತಿಯಲ್ಲ ರಾಕ್ಷಸ!**:ಕಿರಣಾಳ ಜೊತೆ ಪತಿ ಅವಿನಾಶ್ ರಾಕ್ಷಸೀಯ ವರ್ತನೆ ತೋರಿದ್ದು, ವಿದ್ಯುತ್ ಶಾಕ್ ಕೊಟ್ಟಿದ್ದಾನೆ. ಸಾಲದ್ದಕ್ಕೆ ಲಟ್ಟಣಿಗೆಯಿಂದ ಹಲ್ಲೆ ಮಾಡಿದ್ದಾನೆ. ಮಕ್ಕಳ ಮುಂದೆಯೇ ಆಕೆಯನ್ನು ಬೆತ್ತಲೆ ಮಾಡಿ ಹಿಂಸೆ ಕೊಟ್ಟಿದ್ದಾನೆ ಎನ್ನಲಾಗಿದೆ. ಅಲ್ಲದೆ, ಕಿರಣಾ ಮೃತದೇಹವನ್ನು ಬೆಳಗಾವಿ ಬೀಮ್ಸ್ ಶವಾಗಾರಕ್ಕೆ ರವಾನಿಸಿ ಮರಣೋತ್ತರ ಪರೀಕ್ಷೆ ನಡೆಸಲಾಗಿದ್ದು, ಇದರ ಪ್ರಾಥಮಿಕ ವರದಿಯಲ್ಲಿಯೂ ಕೊಲೆ ಎಂಬುದು ದೃಢವಾಗಿದೆ. ವಿಚಾರಣೆ ವೇಳೆ ಪತ್ನಿಯನ್ನು ಕೊಲೆಗೈದ ಬಗ್ಗೆ ಅವಿನಾಶ್ ಕೂಡ ಒಪ್ಪಿಕೊಂಡಿದ್ದು, ಆರೋಪಿಯನ್ನು ಬಂಧಿಸಿ ಹಿಂಡಲಗಾ ಜೈಲಿಗೆ ರವಾನಿಸಲಾಗಿದೆ. ಅಮ್ಮ ಮೃತಪಟ್ಟರೆ ಇತ್ತ ಅಪ್ಪ ಜೈಲಿಗೆ ಹೋಗಿದ್ದರಿಂದ ದಂಪತಿಯ ಇಬ್ಬರು ಮಕ್ಕಳೀಗ ಅನಾಥವಾಗಿದ್ದಾರೆ.

# ಗಿಲ್ಲಿ ಮತ್ತು ಸಿದ್ದರಾಮಯ್ಯ ನಡುವೆ ನಡೆದ ಮಾತುಕತೆ ಬಲು ಮಜಾ



**ಬೆಂಗಳೂರು** :ಗಿಲ್ಲಿ ನಟ ಅದ್ದೂರಿ ಯಾಗಿ ಬಿಗ್‌ಬಾಸ್ ಗೆದ್ದಿದ್ದಾರೆ. ಬಿಗ್‌ಬಾಸ್ ಕನ್ನಡದ ಇತಿಹಾಸದಲ್ಲೇ ಯಾರೂ ಪಡೆಯದಷ್ಟು ಮತಗಳನ್ನು ಗಳಿಸಿ ಗೆದ್ದಿದ್ದಾರೆ. ಬಿಗ್‌ಬಾಸ್ ದೆಸೆಯಿಂದ ಗಿಲ್ಲಿಗೆ ರಾಜ್ಯದಾದ್ಯಂತ ಅಭಿಮಾನಿ ಗಳಾಗಿದ್ದಾರೆ. ಹೋದಲ್ಲಿ ಬಂದಲ್ಲೆಲ್ಲ ಜನ ಮುಗಿಬೀಳುತ್ತಿದ್ದಾರೆ. ಗಿಲ್ಲಿ ಸಹ ಗೆದ್ದು ಬಂದ ಬಳಿಕ ಚಿತ್ರರಂಗದ ಹಿರಿಯರು, ರಾಜ್ಯದ ಹಿರಿಯರುಗಳನ್ನು ಭೇಟಿಯಾಗಿ ಆಶೀರ್ವಾದ ಪಡೆಯುತ್ತಿದ್ದಾರೆ. ಮೊದಲಿಗೆ ಸುದೀಪ್ ಬಳಿಕ ಶಿವರಾಜ್ ಕುಮಾರ್ ಅವರನ್ನು ಭೇಟಿಯಾಗಿ ಆಶೀರ್ವಾದ ಪಡೆದ ಗಿಲ್ಲಿ ನಟ, ಇದೀಗ ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಆಶೀರ್ವಾದ ಪಡೆದಿದ್ದಾರೆ. ಈ ವೇಳೆ ಸಿದ್ದರಾಮಯ್ಯ ಹಾಗೂ ಗಿಲ್ಲಿ ನಡುವೆ ನಡೆದ ಮಾತುಕತೆ ಬಲು ಮಜವಾಗಿದೆ.

ಸಿಎಂ ಸಿದ್ದರಾಮಯ್ಯ ಅವರ ಭೇಟಿಯಾಗಿ ಗಿಲ್ಲಿ ಆಶೀರ್ವಾದ ಪಡೆದಿದ್ದಾರೆ. ಬಳಿಕ ಅಲ್ಲಿದ್ದ ಕೆಲವರು ಗಿಲ್ಲಿಯ ಪರಿಚಯವನ್ನು ಸಿದ್ದ ರಾಮಯ್ಯ ಅವರಿಗೆ ಮಾಡಿಕೊಟ್ಟು, ಮಳವಳ್ಳಿಯವನು ಎಂದಿದ್ದಾರೆ. ಕೂಡಲೇ ಸಿಎಂ ಸಿದ್ದರಾಮಯ್ಯ ಅವರು, 'ಓಹ್ ಶಿವಣ್ಣನ ಊರಿನವನಾ?' ಎಂದಿದ್ದಾರೆ. ಸಿದ್ದರಾಮಯ್ಯ ಅವರು ರಾಜಕೀಯ ಮುಖಂಡ ಮಳವಳ್ಳಿ ಶಿವಣ್ಣ ಬಗ್ಗೆ ಗಿಲ್ಲಿಯಲ್ಲಿ ವಿಚಾರಿಸಿದರು. 'ಶಿವಣ್ಣ ಊರಿನಲ್ಲಿ ಇಲ್ಲ ಅನಿಸುತ್ತೆ, ಬರ್ತಿರ್ತಾರಾ ಊರು ಕಡೆಗೆ?' ಎಂದು ಕೇಳಿದರು ಸಿಎಂ. ಅದಕ್ಕೆ ಗಿಲ್ಲಿ, 'ಹೌದಣ್ಣ, ಆಗಾಗ ಬರ್ತಿರ್ತಾರೆ' ಎಂದರು.

ಬಳಿಕ ಅಲ್ಲಿದ್ದ ಕೆಲವರು, '50 ಲಕ್ಷ ಕೊಟ್ಟಿದ್ದಾರೆ ಬಹುಮಾನ' ಎಂದರು. ಇನ್ನೊಬ್ಬರು ಕಾರು ಸಹ ಕೊಟ್ಟವ್ರೆ ಎಂದರು. ಇನ್ನೊಬ್ಬರು ಶರವಣ 20 ಲಕ್ಷ ಕೊಟ್ಟರು ಎಂದರು. ಎಲ್ಲವನ್ನೂ ಕೇಳಿಸಿಕೊಂಡ ಸಿಎಂ, ಓಹ್ ಶರವಣನೂ ಕೊಟ್ರ ಎಂದರು. ಅದಕ್ಕೆ ಗಿಲ್ಲಿ, ಅವರು ರನ್ನರ್ ಅಪ್‌ಗೆ ಅಂದರೆ ಸೆಕೆಂಡ್ ಬಂದವರಿಗೆ ಕೊಟ್ರು ಸಾರ್ ಎಂದರು. ಬಳಿಕ ಅಲ್ಲೇ ಇದ್ದ ಭೈರತಿ ಸುರೇಶ್ ಅವರು, ಸುದೀಪ್ ಅವರು 10 ಕೊಟ್ಟಿರಬೇಕು ಅಲ್ವ ಎಂದರು, ಗಿಲ್ಲಿ ಹೌದೆಂದರು.

ಬಳಿಕ ಸಿದ್ದರಾಮಯ್ಯ ಅವರು, 'ನಿಮ್ಮ ತಂದೆ ತಾಯಿ ಏನು ಮಾಡ್ತಾರೆ? ಎಂದರು ಅದಕ್ಕೆ ಗಿಲ್ಲಿ, ಊರಲ್ಲೇ ವ್ಯವಸಾಯ ಮಾಡ್ತಾರೆ ಸಾರ್ ಎಂದರು. 'ನೀವು ಎಷ್ಟು ಜನ ಅಣ್ಣ-ತಮ್ಮಂದಿರು' ಎಂದು ಲೋ ಕಾ ಭಿ ರಾ ಮ ವಾ ಗಿ ವಿಚಾರಿಸಿದರು. ಅದಕ್ಕೆ ಗಿಲ್ಲಿ, ಅಲ್ಲೇ ಇದ್ದ ಅಣ್ಣನನ್ನು ತೋರಿಸಿ, ಪರಿಚಯ ಮಾಡಿಸಿದರು. ಗಿಲ್ಲಿಯ ಅಣ್ಣನೂ ಸಿಎಂ ಅವರ ಆಶೀರ್ವಾದ ಪಡೆದರು.

ಅಷ್ಟರಲ್ಲೇ ಸಚಿವ ಭೈರತಿ ಸುರೇಶ್ ಅವರು, 'ಬಾಳ ಓಟು ಬಂದಿರಬೇಕು ಅಲ್ವ?' ಎಂದರು. ಅದಕ್ಕೆ ಅಲ್ಲಿದ್ದ ಕೆಲವರು 45 ಕೋಟಿ ಬಂದಿದೆ ಸಾರ್ ಎಂದರು. ಬಳಿಕ ಸ್ವತಃ ಸಿಎಂ ಸಿದ್ದರಾಮಯ್ಯ ಅವರು, 'ಬಿಗ್ ಬಾಸ್ ಇತಿಹಾಸದಲ್ಲೇ ಇವನಿಗೆ ಹೆಚ್ಚು ಓಟು ಬಂದಿದೆ' ಎಂದರು. ಬಳಿಕ ಮಾತು ಮುಂದುವರೆಸಿ, 'ಓಟಿಗಿಂತಲೂ ಬಾಳ ಜನಪ್ರಿಯತೆ ಪಡೆದಿದ್ದಾನೆ, ಒಳ್ಳೆದಾಗಲಿ' ಎಂದರು.

ಸಚಿವ ಭೈರತಿ ಸುರೇಶ್ ಅವರು, 'ಒಳ್ಳೆ ಹುಡುಗ ಸಾರ್, ಪಾಪ ಎಲ್ಲರನ್ನೂ ನಗಿಸುತ್ತಿದ್ದ, ಮನೆಯಲ್ಲಿ ನನ್ನ ಪತ್ನಿ ಸಹ ಶೋ ನೋಡ್ತಿದ್ರು, ಇವನ ಫ್ಯಾನ್ ಅವರು' ಎಂದರು. ಭೈರತಿ ಸುರೇಶ್ ಮಾತಿಗೆ ಎಲ್ಲರೂ ನಕ್ಕರು. ಸಚಿವ ಭೈರತಿ ಸುರೇಶ್ ಅವರು, 'ಮುಂದೆ, ಸಿನಿಮಾ ಮಾಡ್ತೀಯ' ಎಂದರು, ಗಿಲ್ಲಿ ನೋಡೋಣ ಎಂಬಂತೆ ನಕ್ಕು ಸುಮ್ಮನಾದರು. ಗಿಲ್ಲಿ, ಸಿಎಂ ಸಿದ್ದರಾಮಯ್ಯ ಅವರಿಗೆ ಹಾರ ಹಾಕುವ ಪ್ರಯತ್ನ ಮಾಡಿದರು. ಆದರೆ ಅದೇ ಹಾರನ್ನು ಸಿಎಂ ಸಿದ್ದರಾಮಯ್ಯ ಅವರು ಗಿಲ್ಲಿಗೆ ಹಾಕಿದರು.

# ಅನಸ್ತೇಶಿಯಾ ಕೊಟ್ಟು ವೃದ್ದ ದೊಡಪ್ಪ,ದೊಡ್ಡಮ್ಮನನ್ನು ಕೊಂದ ವೈದ್ಯ



**ಶಿವಮೊಗ್ಗ:** ಭದ್ರಾವತಿ ಪಟ್ಟಣ ದಲ್ಲಿ ನಡೆದ ವೃದ್ಧ ದಂಪತಿ ಸಾವಿನ ಪ್ರಕರಣದಲ್ಲಿ ಬೆಚ್ಚಿಬೀಳಿಸುವ ಸತ್ಯ ಬೆಳಕಿಗೆ ಬಂದಿದೆ. ವೃದ್ಧ ದೊಡ್ಡಪ್ಪ ಹಾಗೂ ದೊಡ್ಡಮ್ಮನನ್ನು ಅವರದೇ ಸಂಬಂಧಿ ಹಾಗೂ ವೈದ್ಯನೊಬ್ಬ ಹೆಚ್ಚಿನ ಪ್ರಮಾಣದ ಅನಸ್ತೇಶಿಯಾ ನೀಡಿ ಹತ್ಯೆ ಮಾಡಿರುವುದು ಪೊಲೀಸ್ ತನಿಖೆಯಲ್ಲಿ ದೃಢಪಟ್ಟಿದೆ. ಈ ಸಂಬಂಧ ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ.

ಈ ಘಟನೆ **ಭದ್ರಾವತಿ**ಯ ಬೂತನ ಗುಡಿ ಸಮೀಪದ ನಿವಾಸದಲ್ಲಿ ನಡೆದಿದೆ. ಮೃತರನ್ನು ಜಯಮ್ಮ (75) ಹಾಗೂ ಚಂದ್ರಣ್ಣ (78) ಎಂದು ಗುರುತಿಸಲಾಗಿದ್ದು, ಕೆಲ ದಿನಗಳ ಹಿಂದೆ ಅವರು ಅನುಮಾನಾಸ್ಪದವಾಗಿ ಸಾವನ್ನಪ್ಪಿದ್ದರು. ಆರಂಭದಲ್ಲಿ ಸಹಜ ಸಾವು ಎಂದು ಶಂಕಿಸಲಾಗಿದ್ದರೂ, ಪ್ರಕರಣದ ಬೆನ್ನು ಬಿದ್ದ ಪೊಲೀಸರು ಆಳವಾದ ತನಿಖೆ ನಡೆಸಿದಾಗ ಇದು ಪೂರ್ವಯೋಜಿತ ಕೊಲೆ ಎಂಬುದು ಬಹಿರಂಗವಾಗಿದೆ.

ಪೊಲೀಸರ ಮಾಹಿತಿ ಪ್ರಕಾರ, ಬಂಧಿತ ಆರೋಪಿಯನ್ನು ಡಾ. ಮಲ್ಲೇಶ್ ಎಂದು ಗುರುತಿಸಲಾಗಿದೆ. ಆತ ಮೃತ ಚಂದ್ರಣ್ಣ ಅವರ ತಮ್ಮನ ಮಗನಾಗಿದ್ದು, ಆಯುರ್ವೇದಿಕ್ ವೈದ್ಯನಾಗಿ ಕಾರ್ಯನಿರ್ವಹಿಸುತ್ತಿದ್ದ. ಆದರೆ ಇತ್ತೀಚಿನ ದಿನಗಳಲ್ಲಿ ಭಾರೀ ಸಾಲದ ಬಾಧೆಗೆ ಸಿಲುಕಿದ್ದ ಮಲ್ಲೇಶ್, ಆರ್ಥಿಕ ಸಂಕಷ್ಟದಿಂದ ಹೊರಬರಲು ಹಲವು ಪ್ರಯತ್ನಗಳನ್ನು ಮಾಡುತ್ತಿದ್ದನು ಎನ್ನಲಾಗಿದೆ.

ಸಾಲ ತೀರಿಸುವ ಉದ್ದೇಶ ದಿಂದ ಮಲ್ಲೇಶ್ ತನ್ನ ದೊಡ್ಡಪ್ಪ ಚಂದ್ರಣ್ಣ ಅವರ ಬಳಿ ಸುಮಾರು 15 ಲಕ್ಷ ರೂಪಾಯಿ ಹಣ ಕೇಳಿದ್ದ. ಆದರೆ ಚಂದ್ರಣ್ಣ ಅವರು ಹಣ ನೀಡಲು ನಿರಾಕರಿಸಿದ್ದರು. ಇದೇ ವಿಷಯದಿಂದ ಬೇಸತ್ತ ಮಲ್ಲೇಶ್, ಹಣ ಸಿಗದ ಸೇಡನ್ನು ತೀರಿಸಿಕೊಳ್ಳಲು ಕ್ರೂರ ನಿರ್ಧಾರ ಕೈಗೊಂಡಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.



ಆ ರೋ ಪಿ ಯು ವೈದ್ಯನಾಗಿ ದ್ದುದನ್ನು ದುರುಪಯೋಗ ಪಡಿಸಿಕೊಂಡು, ಚಂದ್ರಣ್ಣ ಮತ್ತು ಜಯಮ್ಮ ಅವರಿಗೆ ಚಿಕಿತ್ಸೆ ನೀಡುವ ನೆಪದಲ್ಲಿ ಹೆಚ್ಚಿನ ಪ್ರಮಾಣದ ಅನಸ್ತೇಶಿಯಾ ಡೋಸ್ ನೀಡಿದ್ದಾನೆ. ಅತಿಯಾದ ಡೋಸೇಜ್‌ನ ಪರಿಣಾಮ ಇಬ್ಬರ ರಕ್ತದೊತ್ತಡ (ಬಿಪಿ) ತೀವ್ರವಾಗಿ ಕುಸಿದು, ಅವರು ಅಸ್ವಸ್ಥಗೊಂಡು ಸಾವನ್ನಪ್ಪಿದ್ದಾರೆ ಎನ್ನಲಾಗಿದೆ. ಬಳಿಕ ಯಾರಿಗೂ ಅನುಮಾನ ಬಾರದಂತೆ ಇಬ್ಬರನ್ನು ಬೇರೆ ಬೇರೆ ಸ್ಥಳಗಳಲ್ಲಿ ಮಲಗಿಸಿ, ಮನೆಯಲ್ಲಿದ್ದ ಚಿನ್ನಾಭರಣಗಳನ್ನು ದೋಚಿಕೊಂಡು ಪರಾರಿಯಾಗಿದ್ದಾನೆ.

ಹತ್ಯೆಯ ನಂತರ ಮಲ್ಲೇಶ್ ದೋಚಿದ ಚಿನ್ನಾಭರಣಗಳನ್ನು ಅಡವಿಟ್ಟು, ಅದರಿಂದ ಬಂದ ಹಣವನ್ನು ತನ್ನ ಸಾಲ ತೀರಿಸಲು ಬಳಸಿಕೊಂಡಿದ್ದಾನೆ. ತನಿಖೆಯ ವೇಳೆ ಪೊಲೀಸರು ಆರೋಪಿಯಿಂದ ಸುಮಾರು 80 ಗ್ರಾಂ ಚಿನ್ನವನ್ನು ವಶಕ್ಕೆ ಪಡೆದಿದ್ದಾರೆ. ಅಲ್ಲದೇ, ಸಾಲ ತೀರಿಸಿದ ಬಳಿಕ ಆರೋಪಿಯ ಖಾತೆಯಲ್ಲಿ ಸುಮಾರು 50 ಸಾವಿರ ರೂಪಾಯಿ ಉಳಿದಿದ್ದುದೂ ಪತ್ತೆಯಾಗಿದೆ.

ಈ ಪ್ರಕರಣವನ್ನು ಭೇದಿಸಿದ ಕರ್ನಾಟಕ ಪೊಲೀಸ್ ಇಲಾಖೆ ಅಧಿಕಾರಿಗಳು, ವೃದ್ಧ ದಂಪತಿ ಸಾವಿಗೆ ಕಾರಣವಾದ ಎಲ್ಲ ಸಾಂದರ್ಭಿಕ ಮತ್ತು ತಾಂತ್ರಿಕ ಸಾಕ್ಷ್ಯಗಳನ್ನು ಸಂಗ್ರಹಿಸಿದ್ದಾರೆ. ವೈದ್ಯನೊಬ್ಬನೇ ತನ್ನದೇ ಸಂಬಂಧಿಕರನ್ನು ಹಣಕ್ಕಾಗಿ ಹತ್ಯೆ ಮಾಡಿರುವುದು ಸ್ಥಳೀಯರಲ್ಲಿ ಭಾರೀ ಆಘಾತ ಉಂಟುಮಾಡಿದೆ.

ಪೊಲೀಸರು ಆರೋಪಿ ಮಲ್ಲೇಶ್‌ನನ್ನು ವಶಕ್ಕೆ ಪಡೆದು ವಿಚಾರಣೆ ಮುಂದುವರಿಸಿದ್ದು, ಪ್ರಕರಣಕ್ಕೆ ಸಂಬಂಧಿಸಿದ ಇನ್ನಷ್ಟು ಅಂಶಗಳು ಹೊರಬೀಳುವ ಸಾಧ್ಯತೆ ಇದೆ. ವೃದ್ಧ ದಂಪತಿಯ ಅಮಾನುಷ ಹತ್ಯೆ ಭದ್ರಾವತಿ ಸೇರಿದಂತೆ ಇಡೀ ಶಿವಮೊಗ್ಗ ಜಿಲ್ಲೆಯಲ್ಲಿ ಸಂಚಲನ ಮೂಡಿಸಿದೆ.

# 23ನೇ ವರ್ಷದ ನಗರದೇವತೆ ಅಣ್ಣಮ್ಮದೇವಿ ಅದ್ದೂರಿ ಉತ್ಸವ



**ಬೆಂಗಳೂರು:**ಬೆಳಿಗ್ಗೆ 9 ಗಂಟೆಗೆ ನಗರ ದೇವತೆ ಅಣ್ಣಮ್ಮ ದೇವಿಯನ್ನು ದಾಸರಹಳ್ಳಿ ಗ್ರಾಮದೊಳಗೆ ಕರೆತರಲಾಗುವುದು' ಎಂದು ಗಂಧದ ಗುಡಿ ಕನ್ನಡ ಯುವಕರ ಸಂಘದ ಅಧ್ಯಕ್ಷ ಪಿ. ನಾಗರಾಜು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಶುಕ್ರವಾರ 9:30ಕ್ಕೆ ಮಹಾ ಮಂಗಳಾರತಿ ಹಾಗೂ ಪ್ರಸಾದ ವಿನಿಯೋಗ ಮತ್ತು ಸಂಜೆ 6ಗಂಟೆಗೆ ಮಹಾಮಂಗಳಾರತಿ ಹಾಗೂ ಭಜನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಜ. 24ನೇ ಶನಿವಾರ ಬೆಳಗ್ಗೆ 9ಗಂಟೆಗೆ ಮಹಾಮಂಗಳಾರತಿ ಮತ್ತು12ಕ್ಕೆ "ಅನ್ನಸಂತರ್ಪಣೆ" ಹಾಗೂ ಸಂಜೆ 6 ಗಂಟೆಗೆ "ರಸಮಂಜರಿ" ಕಾರ್ಯಕ್ರಮ ಮತ್ತು ಸ್ಥಳೀಯ ಮುಖಂಡರು, ಶಾಸಕ ಎಸ್. ಮುನಿರಾಜು ಅವರು ಭಾಗವಹಿಸುವರು.

ಜ.25 ನೇ ಭಾನುವಾರ ಬೆಳಗ್ಗೆ 9 ಗಂಟೆಗೆ ಮಹಾಮಂಗಳಾರತಿ ಮತ್ತು ಸಂಜೆ 6ಗಂಟೆಗೆ ಮಹಾಮಂಗಳಾರತಿಯೊಂದಿಗೆ ದೇವಿಯನ್ನು ಮುತ್ತಿನ ಪಲ್ಲಕ್ಕಿಯಲ್ಲಿ ದಾಸರಹಳ್ಳಿಯ ಪ್ರಮುಖ ಬೀದಿಯಲ್ಲಿ ತಮಟೆ, ವೀರಗಾಸೆ, ಗೊಂಬೆ ಕುಣಿತ. ಡೊಳ್ಳು ವಾದ್ಯಗಳೊಂದಿಗೆ ಮೆರವಣಿಗೆ ಮಾಡಲಾಗುವುದು' ಎಂದು ತಿಳಿಸಿದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.